ವಿಜಯಪುರ | ಸಂಪುಟ 02 | ಸಂಚಿಕೆ 125 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಭಾನುವಾರ, ಜುಲೈ 07, 2024

“ಮುಖ್ಯಮಂತ್ರಿ ಪತ್ನಿ ಹೆಸರಿಗೆ ನಿವೇಶನ ಹಂಚಿಕೆಯಾಗಿರುವ ಮೂಡಾ ಹಗರಣದಲ್ಲಿ ನನ್ನ ಪಾತ್ರವಿಲ್ಲ. ಈ ವಿಚಾರದಲ್ಲಿ ಕುಮಾರಸ್ವಾಮಿ ಮಾಡುತ್ತಿರುವುದು ಆಧಾರ ರಹಿತ ಆರೋಪ. ಹುಚ್ಚು ಹಿಡಿದಿರುವ ಕಾರಣ ಅವರು ಈ ರೀತಿ ಸುಳ್ಳು ಆರೋಪ ಮಾಡುತ್ತಿದ್ದಾರೆ.”



– ಡಿ.ಕೆ.ಶಿವಕುಮಾರ
ಉಪ ಮುಖ್ಯಮಂತ್ರಿ

ಅಕ್ಕಿ ದಾಸ್ತಾನು ಇದ್ದರೂ ಅಕ್ಕಿ ನೀಡುತ್ತಿಲ್ಲ । ಕೇಂದ್ರದ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ । ಸಿಎಂ ಸಿದ್ದರಾಮಯ್ಯ ಕಿಡಿ

# ಕೇಂದ್ರ ಭಾರತ್ ರೈಸ್ ಮಾರಾಟ ನಿಲ್ಲಿಸಿದ್ದಕ್ಕೆ ರಾಜಕೀಯ ಕಾರಣ :ಸಿಎಂ

**ಉದಯರಶ್ಮಿ ನ್ಯೂಸ್**

ಬೆಂಗಳೂರು: ರಾಜ್ಯಕ್ಕೆ ಎಂಆರ್‌ಪಿ ದರದಲ್ಲಿ 29 ರೂ.ಗೆ ಕೆಜಿ ಭಾರತ್ ಅಕ್ಕಿ ಮಾರಾಟವನ್ನು ನಿಲ್ಲಿಸಿದ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಶನಿವಾರ ವಿಧಾನಸೌಧದಲ್ಲಿ ಮಾಜಿ ಉಪಪ್ರಧಾನಿ ಬಾಬು ಜಗಜೀವನ್ ರಾಂ ಅವರ ಪುಣ್ಯತಿಥಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ, ಕೇಂದ್ರ ಸರ್ಕಾರ ಭಾರತ್ ಅಕ್ಕಿ ಮಾರಾಟ ಸ್ಥಗಿ-ತಗೊಳಿಸಿರುವುದರ ವಿರುದ್ಧ ನಾವು ಪ್ರತಿಭಟನೆ ಪ್ರಾರಂಭಿಸುತ್ತೇವೆ. ಅವರ ಬಳಿ ಅಕ್ಕಿ ದಾಸ್ತಾನು ಇದ್ದರೂ ಅಕ್ಕಿ ನೀಡುತ್ತಿಲ್ಲ ಎಂದರೆ ಅದು ರಾಜಕೀಯ ಎಂದು ತಿರುಗೇಟು ನೀಡಿದ್ದಾರೆ.

ಚುನಾವಣೆ ಉದ್ದೇಶದಿಂದ ಭಾರತ್ ಅಕ್ಕಿಯ ಮಾರಾಟ ಮಾಡಲಾಯಿತು. ಚುನಾವಣೆ ಮುಗಿದ ಮೇಲೆ ಅದನ್ನು ನಿಲ್ಲಿಸಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಕೇಂದ್ರದ ವಿರುದ್ಧ ವಾಗ್ದಾಳಿ ನಡೆಸಿದರು.

ಶನಿವಾರ ವಿಧಾನಸೌಧದಲ್ಲಿ ಮಾಜಿ ಉಪಪ್ರಧಾನಿ ಬಾಬು ಜಗಜೀವನ್ ರಾಂ ಅವರ ಪುಣ್ಯತಿಥಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ, ಕೇಂದ್ರ ಸರ್ಕಾರ ಭಾರತ್ ಅಕ್ಕಿ ಮಾರಾಟ ಸ್ಥಗಿ-ತಗೊಳಿಸಿರುವುದರ ವಿರುದ್ಧ ನಾವು ಪ್ರತಿಭಟನೆ ಪ್ರಾರಂಭಿಸುತ್ತೇವೆ. ಅವರ ಬಳಿ ಅಕ್ಕಿ ದಾಸ್ತಾನು ಇದ್ದರೂ ಅಕ್ಕಿ ನೀಡುತ್ತಿಲ್ಲ ಎಂದರೆ ಅದು ರಾಜಕೀಯ ಎಂದು ತಿರುಗೇಟು ನೀಡಿದ್ದಾರೆ.



ಚುನಾವಣೆ ಉದ್ದೇಶದಿಂದ ಭಾರತ್ ಅಕ್ಕಿಯ ಮಾರಾಟ ಮಾಡಲಾಯಿತು. ಚುನಾವಣೆ ಮುಗಿದ ಮೇಲೆ ಅದನ್ನು ನಿಲ್ಲಿಸಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಕೇಂದ್ರದ ವಿರುದ್ಧ ವಾಗ್ದಾಳಿ ನಡೆಸಿದರು.

ನಮ್ಮ ಸರ್ಕಾರಕ್ಕೆ ಕೆಟ್ಟ ಹೆಸರು ತರಲು ಕೇಂದ್ರ ಸರ್ಕಾರ ಈ ರೀತಿ ಮಾಡುತ್ತಿದೆ. ಅಕ್ಕಿಯ ದಾಸ್ತಾನು ಇಲ್ಲದಿದ್ದರೆ ಅದು ಅರ್ಥವಾಗುವಂತಹದ್ದು. ಆದರೆ ಅವರ ಬಳಿ ಅಕ್ಕಿ ಇದ್ದರೂ ಅದನ್ನು ನೀಡುತ್ತಿಲ್ಲ. ‘ಅನ್ನ ಭಾಗ್ಯ’ದ ಉಚಿತ ಅಕ್ಕಿ ಅಕ್ಕಿ ನೀಡುವಂತೆ ನಾವು ಕೇಂದ್ರ ಸರ್ಕಾರವನ್ನು ಸಂಪರ್ಕಿಸಿದಾಗ ಅವರು ಭಾರತೀಯ ಆಹಾರ ನಿಗಮದಲ್ಲಿ ಸಾಕಷ್ಟು ಅಕ್ಕಿ ದಾಸ್ತಾನು ಇದ್ದರೂ ಅವರು ನೀಡಲು ನಿರಾಕರಿಸಿದರು ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

“ಕೇಂದ್ರ ಸರ್ಕಾರ ದಲಿತರು, ಬಡವರು ಮತ್ತು ಹಿಂದುಳಿದವರ ಜೊತೆ ಇಲ್ಲ ಎಂಬುದು ಸ್ಪಷ್ಟವಾಗಿದೆ. ಎಲ್ಲಾ ಜಾತಿಯಲ್ಲೂ ಬಡವರಿದ್ದಾರೆ. ರಾಜ್ಯ ಸರ್ಕಾರವು ಸಮಾಜದ ಬಡವರಿಗೆ ಅನ್ನ ನೀಡಲು ಬಯಸಿದಾಗ ಅವರು ಅಕ್ಕಿ ನೀಡಲು ನಿರಾಕರಿಸಿದರು” ಎಂದು ಸಿಎಂ ಸಿದ್ದರಾಮಯ್ಯ ಆರೋಪಿಸಿದರು.


ನಾವು ಅಕ್ಕಿ ಖರೀದಿಸಲು ಸಿದ್ಧರಿದ್ದರೂ ಕೇಂದ್ರ ಸರ್ಕಾರ ಉದ್ದೇಶಪೂರ್ವಕವಾಗಿ ಕರ್ನಾಟಕಕ್ಕೆ ಅಕ್ಕಿ ನೀಡುತ್ತಿಲ್ಲ ಎಂದು ಸಿಎಂ ಟೀಕಿಸಿದರು.

## ರಾಜ ನುಡಿ

ಕಪ್ಪೆಗಳು ಗುಟುರಿಡುವ ಮಳೆಗಾಲದಲ್ಲಿ ಕೋಗಿಲೆ ಮೂಕವಾಗಿ ಉಳಿದುಬಿಡುತ್ತದೆ. ಕಪ್ಪೆಗಳು ಮೂಖವಾಗಿರುವ ವಸಂತ ಋತುವಲ್ಲಿ ಕೋಗಿಲೆ ಮೈತುಂಬಿ ಹಾಡುತ್ತದೆ. ಮೂರ್ಖರು ಆರ್ಭಟಿಸುವಾಗ ಜಾಣರಾದವರು ಸುಮ್ಮನಿರುವುದು ಲೇಸು.

–ಡಾ. ರಾಜಶೇಖರ ನಾಗೂರ

## ವಚನ ಚಿಂತನ



*ಮದ್ದ ನಂಬಿಕೊಂಡಡೆ ರೋಗ ಮಾಣದಿಪ್ಪುದೆ?*
*ಸಜ್ಜನಿಕೆಯುಳ್ಳಡೆ ಪ್ರಸಾದಕಾಯ ಕೆಡುವುದೆ ?*
*ಪ್ರಾಣ, ಲಿಂಗವಾದಡೆ ಪ್ರಾಣ ಬೇರಪ್ಪುದೆ ?*
*ಪ್ರಾಣಲಿಂಗ ಪ್ರಸಾದವನು ತಿಳಿದು ನೀವು ನೋಡಿರೆ,*
*ನಾದ ಬಿಂದು ಸೂಸದ ಮುನ್ನ,*
*ಆದಿಯ ಪ್ರಸಾದವ ಭೇದಿಸಿಕೊಂಡರು*
*ಗುಹೇಶ್ವರಾ ನಿಮ್ಮ ಶರಣರು.*

ಬಸವಾದಿ ಶರಣರು ರೋಗಗಳ ಬಗ್ಗೆ ವೈಜ್ಞಾನಿಕ ಅರಿವನ್ನು ಹೊಂದಿದ್ದರು ಎಂಬುದಕ್ಕೆ ಈ ವಚನದಲ್ಲಿ ಅಲ್ಲಮಪ್ರಭುಗಳು ಅನೇಕ ಸಾಕ್ಷಿಗಳನ್ನು ತೆರೆದಿಟ್ಟಿದ್ದಾರೆ. ರೋಗಗಳ ಉಗಮ ಮತ್ತು ಹರಡುವಿಕೆಗೆ ದೈವಶಕ್ತಿಯೇ ಕಾರಣವೆಂದು ಅದರ ಸಂತೃಪ್ತಿಗಾಗಿ ಪ್ರಾಣಿಬಲಿಯಂತಹ ಮೂಢ ಆಚರ ಣೆಗಳನ್ನು ಆಚರಿಸುವ ಆ ಕಾಲಘಟ್ಟದಲ್ಲಿ ಅಂತಹ ನಂಬಿಕೆಯನ್ನು ಹೊಡೆ ದೋಡಿಸಿ ರೋಗನಿವಾರಣೆಗೆ ಸೂಕ್ತ ಮುದ್ದು ಪಡೆಯುವಂತೆ ಜನರಲ್ಲಿ ಜಾಗೃತಿ ಮೂಡಿಸಿರುವುದನ್ನು ವಚನದ ಪ್ರಾರಂಭದ ಸಾಲಿನಲ್ಲಿ ನಾವು ಕಾಣುತ್ತೇವೆ.”ಮದ್ದ ನಂಬಿಕೊಂಡಡೆ ರೋಗ ಮಾಣದಿಪ್ಪುದೆ ?” ಎನ್ನುವಲ್ಲಿ ತಾವು ಸೇವಿಸುವ ಮದ್ದು /ಔಷದ ಬಗ್ಗೆ ನಂಬಿಕೆ ತಾಳುವಂತೆ ಸೂಚಿಸಿದ್ದಾರೆ.ರೋಗನಿವಾರಣೆ ಕಾರ್ಯದಲ್ಲಿ ಔಷಧದ ಬಗ್ಗೆ ರೋಗಿ ತಾಳುವ ಧನಾತ್ಮಕ ನಂಬಿಕೆಯು ಸಾಕಷ್ಟು ಪರಿಣಾಮ ಬೀರುತ್ತದೆ ಎಂಬುದನ್ನು ವೈದ್ಯರು ಒಪ್ಪಿಕೊಂ ಡಿದ್ದಾರೆ. ನಮ್ಮ ಆಚಾರ–ವಿಚಾರಗಳು ಉತ್ತಮವಾಗಿದ್ದರೆ ಯಾವು ದೇ ರೋಗಗಳು ಬಾಧಿಸುವುದಿಲ್ಲ ಎಂಬುದನ್ನು “ಸಜ್ಜನಿಕೆಯುಳ್ಳ ಡೆ ಪ್ರಸಾದಕಾಯ ಕೆಡುವುದೆ ?”ಇಂದು ಪ್ರಶ್ನಿಸುವುದರ ಮೂಲಕ ನಡೆ–ನುಡಿ ಸೂಚಿಯಾಗಿರುವಂತೆ ಸಲಹೆ ನೀಡಿದ್ದಾರೆ.ಕಾಯವನ್ನು ಪ್ರಸಾ ದಕಾಯ ಮಾಡಿಕೊಂಡಾಗ ಕಾಯಕ್ಕೆ ತಗುಲುವ ರೋಗ ರುಜಿನಗಳು ಕಡಿ ಮೆಯಾಗಿ ಪ್ರಾಣವು ಪರಿಶುದ್ಧವಾಗುವದು ಪರಿಣಾಮವಾಗಿ ಗುಹೇಶ್ವರ ನ ಶರಣರು ಅಂಗಭಾವವನ್ನು ಅಳಿದು ಲಿಂಗ ಭಾವದಲ್ಲಿ ನಿಶ್ಚಿಂತರಾಗಿದ್ದ ರು ಎಂದಿದ್ದಾರೆ.ಯಾವುದೇ ರೋಗಗಳ ಬಗ್ಗೆ ಆತಂಕಗೊಳ್ಳ ದೆ ಸೂಕ್ತ ಚಿಕಿತ್ಸೆಯನ್ನು ಪಡೆದು ಮುದ್ದು ಸೇವಿಸಿದರೆ ಅಂಗಕ್ಕೆ ಬರುವ ರೋಗಗಳು ನಿವಾರಣೆಯಾಗುತ್ತವೆ ಎಂಬುದೇ ಈ ವಚನದ ಆಶಯವಾಗಿದೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಪಾಲಿಕೆ ಮಹಾಪೌರ & ಆಯುಕ್ತರಿಂದ ಸ್ವಚ್ಛತೆ-ಅಭಿವೃದ್ಧಿ ಕಾರ್ಯಗಳ ಪರಿಶೀಲನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಮಹಾನಗರ ಪಾಲಿಕೆಯ ಮಹಾಪೌರರಾದ ಮಹೇಜಬಿನ್ ಹೊರ್ತಿ, ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ ಸೇರಿದಂತೆ ವಿವಿಧ ಪಾಲಿಕೆಯ ಸದಸ್ಯರು ಶನಿವಾರ ಬೆಳಿಗ್ಗೆ ವಿಜಯಪುರ ನಗರದ ವಿವಿಧೆಡೆ ಪರಿವೀಕ್ಷಣೆ ನಡೆಸಿ, ನಗರದ ಸ್ವಚ್ಛತೆ ಹಾಗೂ ಅಭಿವೃದ್ಧಿ ಕಾರ್ಯಗಳ ಪರಿಶೀಲನೆ ನಡೆಸಿದರು.

ಶನಿವಾರ ಬೆಳಿಗ್ಗೆ ನಗರದ ಗಾಂಧಿವೃತ್ತದಿಂದ ಪರಿವೀಕ್ಷಣೆ ಆರಂಭಿಸಿದ ಅವರು, ಲಾಲಬಹಾದ್ದೂರ ಶಾಸ್ತ್ರೀ ಮಾರುಕಟ್ಟೆ



ಹಾಗೂ ನೆಹರು ಮಾರುಕಟ್ಟೆಯಲ್ಲಿ ಕೆಲವೊಂದು ಉದ್ದಿಮೆದಾರರು ಅಂಗಡಿಯ ಮುಂಭಾಗದಲ್ಲಿ ಅತಿ-ಕ್ರಮಣ ಮಾಡಿರುವುದನ್ನು ಕಂಡು, ಕೂಡಲೇ ಅತಿಕ್ರಮಣವಾದ ಜಾಗವನ್ನು ತೆರವುಗೊಳಿಸುವಂತೆ ಸೂಚಿಸಲಾಯಿತು.

ನಗರದ ಕೆ.ಸಿ.ಮಾರುಕಟ್ಟೆಯಿಂದ ಟಿಪ್ಪುಸುಲ್ತಾನ್ ವೃತ್ತ ಮಾರ್ಗವಾಗಿ ನವಬಾಗ ಪ್ರದೇಶದಲ್ಲಿ ನಡೆದಿರುವ ರಸ್ತೆ ಕಾಮಗಾರಿಯನ್ನು ಪರಿಶೀಲಿಸಿದ ಅವರು, ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕು. ನಂತರ ಕೇಂದ್ರ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಸುತ್ತಮುತ್ತಲಿನ ಪ್ರದೇಶದಲ್ಲಿ ಸ್ವಚ್ಛತೆಯನ್ನು ಕಾಪಾಡಲು ಸೂಚನೆ ನೀಡಿದ ಅವರು, ನಗರದ ಸೌಂದರ್ಯಕ್ಕಾಗಿ ನಗರದಾದ್ಯಂತೆ ಸ್ವಚ್ಛತೆಗೆ ಆದ್ಯತೆ ನೀಡಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡು ಸ್ವಚ್ಛ ಹಾಗೂ ಸುಂದರ ನಿರ್ಮಾಣಕ್ಕಾಗಿ ಕ್ರಮ ವಹಿಸಲಾಗುವುದು ಎಂದು ಅವರು ಹೇಳಿದರು.

ಇದೇ ಸಂದರ್ಭದಲ್ಲಿ ನಗರದ ಕೇಂದ್ರ ಬಸ್ ನಿಲ್ದಾಣದ ಹತ್ತಿರದ ಮುಖ್ಯ ರಸ್ತೆಯ ಬದಿಯಲ್ಲಿ ಸಸಿನೆಗಳನ್ನು ನೆಡಲಾಯಿತು. ಮಹಾನಗರ ಪಾಲಿಕೆಯ ವಿವಿಧ ಸದಸ್ಯರು, ಪಾಲಿಕೆ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.

# ಪರಿಸರ ಸ್ನೇಹಿ ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ಡಿಸಿ ಟಿ.ಭೂಬಾಲನ್ ಸೂಚನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಲಮೂಲಗಳಾದ ನದಿ, ಕೆರೆ, ಕಾಲುವೆ ಮತ್ತು ಭಾವಿಗಳು ಮಾಲಿನ್ಯಕ್ಕೊಳಗಾಗದಂತೆ ಸಂರಕ್ಷಿಸುವ ಉದ್ದೇಶದಿಂದ ಪರಿಸರ ಸ್ನೇಹಿ ಮೂರ್ತಿ ಪ್ರತಿಷ್ಠಾಪನೆಯೊಂದಿಗೆ ಔಷದೀಯ ಗುಣವುಳ್ಳ ಸಸಿಗಳನ್ನು ಬೆಳೆಸುವ ಮೂಲಕ ಪರಿಸರ ಸಂರಕ್ಷಣೆ ಮುಂದಾಗುವಂತೆ ಜನರಲ್ಲಿ ಜಾಗೃತಿ ಮೂಡಿಸಲು ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಸೂಚಿಸಿದ್ದಾರೆ.

ಜಿಲ್ಲೆಯಾದ್ಯಂತ ಪರಿಸರ ಸ್ನೇಹಿ ಗಣೇಶ ವಿಗ್ರಹ ಪ್ರತಿಷ್ಠಾಪನೆ ಕುರಿತು ಇತ್ತೀಚೆಗೆ ನಗರ ಸ್ಥಳೀಯ ಸಂಸ್ಥೆಗಳ ಆಯುಕ್ತರು, ಪರಿಸರ ಅಧಿಕಾರಿಗಳು, ಕೆ.ಎಸ್.ಪಿ.ಎಸಿ.ಬಿ. ವಿಜಯಪುರ ಹಾಗೂ ಮುಖ್ಯಾಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಪರಿಸರ ಸಂರಕ್ಷಣೆ ಹಾಗೂ ನೀರಿನ ಸಂರಕ್ಷಣೆಗಾಗಿ ಭಾರಲೋಹ ಮಿಶ್ರಿತ ರಾಸಾಯನಿಕಯುಕ್ತ ಬಣ್ಣದಿಂದ ಅಲಂಕೃತಗೊಂಡಂತಹ ಯಾವುದೇ ರೀತಿಯ ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ತಯಾರಿಸಿದ ವಿಗ್ರಹಗಳ ಉತ್ಪಾದನೆ, ಮಾರಾಟ ಹಾಗೂ ನೀರಿನ ಮೂಲಗಳಲ್ಲಿ ವಿಸರ್ಜನೆ ನಿಷೇಧಿಸಲಾಗಿದ್ದು, ಇಂತಹ ವಿಗ್ರಹಗಳ ಮಾರಾಟ, ಉತ್ಪಾದನೆಗೆ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪೊಲೀಸ್ ಇಲಾಖೆ ಸಹಯೋಗದಲ್ಲಿ ನಿಯಂತ್ರಣ ಮಾಡಬೇಕು. ವಿವಿಧ ಮಾಧ್ಯಮಗಳ ಮೂಲಕ ಈ ಕುರಿತು ಸಾರ್ವಜನಿಕರಲ್ಲಿ ತಿಳುವಳಿಕೆ ಜಾಗೃತಿ ಮೂಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದ್ದಾರೆ.

ಔಷಧೀಯ ಗುಣವುಳ್ಳ ಬೀಜವನ್ನು ಮಣ್ಣಿನ ಶೀಡ್‌ಬಾಲ್‌ದಲ್ಲಿ ತಯಾರಿಸಿ ಗಣಪತಿ ಮೂರ್ತಿಯಲ್ಲಿ ಇಟ್ಟು ಮಾರಾಟ ಮಾಡಲು ಎಲ್ಲ ಮೂರ್ತಿ ತಯಾರಕರಿಗೆ ಹಾಗೂ ಮಾರಾಟಗಾರ-ರಿಗೆ ತಿಳಿ ಹೇಳಿ, ವಿಸರ್ಜನೆ ನಂತರ ಸಾರ್ವಜನಿಕರು ಔಷಧೀಯ ಗುಣವುಳ್ಳ ಸಸ್ಯವನ್ನು ತಮ್ಮ ತಮ್ಮ ಮನೆಯ ಪಾಟ್‌ಗಳಲ್ಲಿ ಬೆಳೆಸುವ ಮೂಲಕ ಪರಿಸರ ಸಂರಕ್ಷಣೆಗೆ ಮುಂದಾಗುವಂತೆ ಸೂಕ್ತ ಜಾಗೃತಿ ಮೂಡಿಸಬೇಕು ಎಂದು ಅವರು ಹೇಳಿದರು.

ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸರ್ಕಾರದ ಆದೇಶವನ್ನು ಉಲ್ಲಂಘಿಸಿ ಅನಧಿಕೃತವಾಗಿ ವಿಗ್ರಹಗಳ ತಯಾರಿ–ಮಾರಾಟ ಮಾಡುವವರ ಮೇಲೆ ಹಾಗೂ ನಗರ ಸ್ಥಳೀಯ ಮುಖ್ಯಸ್ಥರ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದ



ಅವರು, ತಮ್ಮ ತಮ್ಮ ವ್ಯಾಪ್ತಿಯಲ್ಲಿನ ಎಲ್ಲ ಮೂರ್ತಿ ತಯಾರಕರು, ಗಣೇಶ ಉತ್ಸವ ಸಮಿತಿ ಸದಸ್ಯರು, ಊರಿನ ಮುಖಂಡರುಗಳು, ನಗರ ಸ್ಥಳೀಯ ಸಂಸ್ಥೆಗಳ ಸದಸ್ಯರನ್ನೊಳಗೊಂಡು ಸಭೆ ನಡೆಸಿ ಸರ್ಕಾರದ ಆದ-ೇಶ–ನಿರ್ದೇಶನಗಳನ್ನು ಪಾಲಿಸುವಂತೆ ಸೂಕ್ತ ತಿಳುವಳಿಕೆ ನೀಡುವಂತೆ ಅವರು ಸೂಚಿಸಿದರು.

ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿ ಮನಿಯಾರ ಸೇರಿದಂತೆ ವಿವಿಧ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ಪರಿಸರ ಅಭಿಯಂತರರು ಉಪಸ್ಥಿತರಿದ್ದರು.

# ಕಾಲುವೆಗಳಿಗೆ ನೀರು ಹರಿಸುವಂತೆ ರೈತ ಸಂಘದಿಂದ ಮನವಿ

**ಉದಯರಶ್ಮಿ ನ್ಯೂಸ್**

ಸಿಂದಗಿ: ತಾಲೂಕಿನ ರೈತರು ಈಗಾಗಲೇ ಬಿತ್ತನೆ ಮಾಡಿದ್ದಾರೆ. ಬೆಳೆಗಳು ನಾಟಿ ರೂಪದಲ್ಲಿ ಬಂದಿವೆ. ಸರಿಯಾಗಿ ಮಳೆ ಬಾರದ ಕಾರಣ ಹಾಳಾಗಿ ರೈತರಿಗೆ ನಷ್ಟವಾಗಲಿದೆ. ಆದ್ದರಿಂದ ಕಾಲುವೆಗಳಿಗೆ ತಕ್ಷಣ ನೀರು ಹರಿಸಿ ಅನುಕೂಲ ಮಾಡಿಕೊಡಬೇಕೆಂದು ಉತ್ತರ ಕರ್ನಾಟಕ ವಲಯ ಅಧ್ಯಕ್ಷ ಬಸನಗೌಡ ಧರ್ಮಗೊಂಡ ಹೇಳಿದರು.

ಪಟ್ಟಣದ ತಾಲೂಕು ಆಡಳಿತ ಸೌಧದದಲ್ಲಿ ಕಾಲುವೆಗಳಿಗೆ ನೀರು ಹರಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘದ ತಾಲೂಕು ಘಟಕದ ವತಿಯಿಂದ ಶನಿವಾರ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, ರೈತರು ಮುಂಗಾರು ಬಿತ್ತನೆ ಕೆಲಸ ಶುರು ಮಾಡಿದ್ದು, ಮಳೆ ಸರಿಯಾಗಿ ಬರದೆಯಿರುವ ಹಿನ್ನಲೆಯಲ್ಲಿ ಬೆಳೆ ಒಣಗುತ್ತಿದೆ. ರೈತರು ಆಕಾಶದತ್ತ ಚಿತ್ತ ನೆಟ್ಟಿದ್ದಾರೆ. ಆದರೆ ಮಳೆಯಾಗುತ್ತಿಲ್ಲ ಕಾರಣ ಕಾಲುವೆಗೆ ನೀರು ಆಗ್ರಹಿಸುವಂತೆ ಒತ್ತಾಯಿಸಿದರು.



ಈ ವೇಳೆ ತಾಲೂಕಾಧ್ಯಕ್ಷ ದಶರಥ-ಸಿಂಗ್ ರಜಪೂತ ಮಾತನಾಡಿ, ರೈತರು ಹೊಲದಲ್ಲಿ ಬೀಜ, ಗೊಬ್ಬರ ಹಾಕಿ ಹಣೆಗೆ ಕೈ ಹಚ್ಚಿಕೊಂಡು ಕುಳಿತುಕೊಳ್ಳುವ ಪರಿಸ್ಥಿತಿ ಬಂದಿದೆ. ಮಳೆ ಸಮಸ್ಯೆಯಿಂದ ಸರಿಯಾಗಿ ನಾಟಿಯಾಗಿದೆ ಒಣಗುತ್ತಿವೆ. ಹೀಗಾಗಿ ಕಾಲುವೆಗಳಿಗೆ ನೀರು ಹರಿಸಬೇಕು ಎಂದು ಆಗ್ರಹಿಸಿದರು.

ಬಾಕ್ಸ್: ತಾಲೂಕಿನಲ್ಲಿ ದಲ್ಲಾಳಿಗಳ ಸಮಸ್ಯೆಯಿಂದ ರೈತರಿಗೆ ಸಾಕಷ್ಟು ಸಮಸ್ಯೆಯಾಗುತ್ತಿದೆ. ರೈತರು ತಂದ ಕಾಯಿಪಲ್ಯೆ, ತರಕಾರಿ ಮಾರಾಟ ಮಾಡದಂತೆ ಮಾಡುತ್ತಿದ್ದಾರೆ. ಇದ-ರಿಂದಾಗಿ ನಿಜವಾದ ರೈತರು ತೀವ್ರ ಸಮಸ್ಯೆ ಎದುರಿಸುತ್ತಿದ್ದು, ಇದನ್ನು ಕೂಡಲೇ ಬಗೆಹರಿಸಬೇಕು ಎಂದು ಎಲ್ಲ ರೈತರು ತಹಶೀಲ್ದಾರ್ ಅವರ ಮುಂದೆ ತಮ್ಮ ಸಮಸ್ಯೆ ಹೇಳಿಕೊಂಡರು.

ಈ ವೇಳೆ ಜಿಲ್ಲಾ ಉಪಾಧ್ಯಕ್ಷ ಮಲ್ಲಪ್ಪ ಬಮ್ಮನಳ್ಳಿ, ತಾಲೂಕು ಕಾರ್ಯದರ್ಶಿ ಶಾಂತಗೌಡ ಮಣೂರ, ಮಾಜಿ ಸೈನಿಕ ಶಬ್ಬೀರ್‌ಪಟೇಲ್ ಬಿರಾದಾರ, ಶಿವಾನಂದ ಭಾಸಗಿ, ಬೀರು, ಬಲಭೀಮ ಕ. ಪಾರಸನಳ್ಳಿ, ಬಲಭೀಮ ಪ. ಪಾರತನಳ್ಳಿ, ಸಿದ್ರಾಮ ಮಾಡಗಿ, ಬಂದೇನವಾಜ್ ಮುಲ್ಲಾ, ಶರಣಪ್ಪ ಸೇರಿದಂತೆ ಅನೇಕ ರೈತರು ಉಪಸ್ಥಿತರಿದ್ದರು.

# ಜು.10ರಂದು ಲೋಕಾ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

**ಉದಯರಶ್ಮಿ ನ್ಯೂಸ್**

ಸಿಂದಗಿ: ಜು.10ರಂದು ತಾಲೂಕು ಆಡಳಿತ ಸೌಧದಲ್ಲಿ ಬೆಳಿಗ್ಗೆ 11 ಗಂಟೆಗೆ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು ಸಿಂದಗಿ ತಾಲೂಕಿನ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ.

ಅಹವಾಲು ಸ್ವೀಕ-ರಿಸುವ ಕಾರ್ಯಕ್ರಮದಲ್ಲಿ ತಾಲೂಕಿನ ಸಾರ್ವಜನಿಕರು ಭರ್ತಿ ಮಾಡಿ ಅರ್ಜಿ ಮತ್ತು ನೋಟರಿಗಳಿಂದ ಅಫಿಡೆವಿಟ್ ಮಾಡಿಸಿದ ಅರ್ಜಿಗಳನ್ನು ಸ್ವೀಕರಿಸಲಾಗುವುದು. ಸರಕಾರಿ ಕಛೇರಿಗಳಲ್ಲಿ ಅಧಿಕೃತವಾಗಿ ಕೆಲಸಗಳನ್ನು ಮಾಡಿಕೊಡುವಲ್ಲಿ ವಿಳಂಬ, ಲಂಚದ ಬೇಡಿಕೆ ಸೇರಿದಂತೆ ಇನ್ನಿತರ ಸಮಸ್ಯೆಗಳನ್ನು ನೀಡುವ ಅಧಿಕಾರಿ ಹಾಗೂ ಸಿಬ್ಬಂದಿಗಳ ವಿರುದ್ಧ ಸಾರ್ವಜನಿಕರು ದೂರುಗಳನ್ನು ನೀಡಬಹುದು. ಪರಿಹಾರ ಕಂಡುಕೊಳ್ಳಬಹುದಾದ ದೂರುಗಳಿಗೆ ಸ್ಥಳದಲ್ಲಿಯೇ ಸಂಬಂಧಿಸಿದ ಸ್ಥಳೀಯ ಅಧಿಕಾರಿಗಳಿಂದ ಇತ್ಯರ್ಥಗೊಳಿಸಲು ಪ್ರಯತ್ನಿಸಲಾಗುವುದು. ಕಳಪೆ ಕಾಮಗಾರಿ, ಸರಕಾರಿ ಹಣದ ದುರುಪಯೋಗ ಸೇರಿದಂತೆ ಅನೇಕ ದೂರುಗಳಿಗಾಗಿ ಕಾರ್ಯಾಲಯದ ದೂರವಾಣಿ 08352-255333, 257786, 295074 ಸಂಖ್ಯೆಗೆ ಸಂಪರ್ಕಿಸಬೇಕು ಎಂದು ಲೋಕಾಯುಕ್ತ ಪೊಲೀಸ್ ಅಧಿಕಾರಿ ಟಿ.ಮಲ್ಲೇಶ ಪತ್ರಿಕಾ ಪ್ರಕಟಣೆಯಲ್ಲಿ ತಿಳಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಲೋಕಾಯುಕ್ತ ಪೊಲೀಸ್ ಅಧೀಕ್ಷಕ 9364062528, ಉಪಾಧೀಕ್ಷ 9364062557, ಲೋಕಾಯುಕ್ತ ಪಿಎಸ್‌ಐ-1 9364062640, ಪಿಎಸ್‌ಐ-2 9364062639 ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ.

ಉದಯ ರಶ್ಮಿ

ಪ್ರತಿ ಮನೆ-ಮನದ ಸಂಗಾತಿ

# ವಿದ್ಯಾರ್ಥಿಗಳ ಪ್ರೀತಿಗೆ ಪಾತ್ರರಾದ ಕಡಿಮನಿ ಗುರುಗಳು :ಶೇಖ

ಉದಯರಶ್ಮಿ ನ್ಯೂಸ್



ಕಲಕೇರಿ: ಶಿಕ್ಷಕ ಸೇವೆಯಲ್ಲಿ ಕರ್ತವ್ಯನಿಷ್ಠೆಯೊಂದಿಗೆ ಕಾರ್ಯನಿರ್ವಹಿಸಿ, ಸರಳ ವ್ಯಕ್ತಿತ್ವದಿಂದ ಸಾರ್ಥಕತೆ ಕಂಡುಕೊಂಡು ನಿವೃತ್ತಿ ಹೊಂದುತ್ತಿರುವ ಶಿಕ್ಷಕರ ಜೀವನ ಸುಖಮಯವಾಗಿರಲಿ ಎಂದು ಸಿ ಆರ್ ಪಿ ಗುಲಾಬ ನದಾಫ ಹೇಳಿದರು.

ಪಟ್ಟಣದ ಶಿಕ್ಷಕರ ಸದನದಲ್ಲಿ ಸರಕಾರಿ ಹಿರಿಯ ಮಾದರಿ ಉರ್ದು ಪ್ರಾಥಮಿಕ ರಾಂಪೂರ ಪಿ.ಟಿ ಶಾಲೆಯ ಮುಖ್ಯ ಶಿಕ್ಷಕ ಆರ್.ಬಿ.ಕಡಿಮನಿ ಅವರು ನಿವೃತ್ತಿ ಹೊಂದಿರುವ ನಿಮಿತ್ಯ ನಡೆದ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಶಿಕ್ಷಕರ ಹುದ್ದೆ ಬಹಳ ಪವಿತ್ರವಾದದ್ದು. ವಿದ್ಯಾರ್ಥಿಗಳಿಗೆ ಉನ್ನತ ವಿಚಾರ ಧಾರೆಗಳು ಹಾಗೂ ಗುಣ ಮಟ್ಟದ ಶಿಕ್ಷಣ ನೀಡಿದಾಗ ಮಾತ್ರ ಅವರು ಸಮಾಜದಲ್ಲಿ ಉತ್ತಮ ವ್ಯಕ್ತಿಯಾಗಿ ಬಾಳಲು ಸಹಕಾರಿಯಾಗುತ್ತದೆ ಎಂದರು.

ವಿಶ್ರಾಂತ ಮುಖ್ಯ ಶಿಕ್ಷಕ ಯು. ಆಯ್ ಶೇಖ ಮಾತನಾಡಿ, ಶಿಕ್ಷಕರು ಸೇವಾ ನಿವೃತ್ತಿ ಹೊಂದಿದ ಬಳಿಕ ಆರೋಗ್ಯ ಕಡೆಗೆ ಹೆಚ್ಚು ಗಮನ ಹರಿಸಬೇಕು.

ಶಿಕ್ಷಕರಾಗಿ ಸೇವೆ ಸಲ್ಲಿಸಿದವರನ್ನು ಇಲಾಖೆ, ಪಾಲಕರು ಹಾಗೂ ವಿದ್ಯಾರ್ಥಿಗಳು ಎಂದೂ ಮರೆಯುವುದಿಲ್ಲ. ತಮಗೆ ವಹಿಸಿದ ಕೆಲಸವನ್ನು ಶ್ರದ್ಧೆ ಹಾಗೂ ಪ್ರಾಮಾಣಿಕತೆಯಿಂದ ನಿರ್ವಹಿಸಿ, ಅಧಿಕಾರಿಗಳು ಮತ್ತು ಪಾಲಕರ ಪ್ರೀತಿ-ವಿಶ್ವಾಸಕ್ಕೆ ಪಾತ್ರರಾದ ಕಡಿಮನಿ ಗುರುಗಳ ನಿವೃತ್ತಿ ಬದುಕು ಚೈತನ್ಯಪೂರ್ಣವಾಗಿರಲಿ ಎಂದು ಹಾರೈದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಉರ್ದು ಶಾಲೆಯ ವಿಶ್ರಾಂತ ಮುಖ್ಯಗುರು ಅರ್ ಬಿ ಕಡಿಮನಿ ಮಾತನಾಡಿ, ತಾವು ಶಿಕ್ಷಣ ಇಲಾಖೆಯಲ್ಲಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಲು ಹಿರಿಯ ಅಧಿಕಾರಿಗಳ, ಸರ್ವ ಶಿಕ್ಷಕರ ಪ್ರೋತ್ಸಾಹ ಹಾಗೂ ಸಹದ್ಯೋಗಿಗಳ ಸಹಕಾರವೇ ಕಾರಣ ಎಂದು ತಿಳಿಸಿದರು.

ಸಮಾರಂಭದಲ್ಲಿ ವಿಶ್ರಾಂತ ಮುಖ್ಯಗುರು ಆರ್ ಬಿ ಕಡಿಮನಿ ಅವರಿಗೆ ಅವರ ಕುಟುಂಬಸ್ಥರು, ಶಿಕ್ಷಕರು ಸೇರಿದಂತೆ ಹಲವರು ಸನ್ಮಾನಿಸಿ ಗೌರವಿಸಿದರು.

ಝುಡ್.ಎಸ್.ಮನಿಯಾರ್, ಎನ್.ಜಿ.ಮನಿಯಾರ, ಯುಸಿಪ್ ಸಿರಸಗಿ, ಶ್ರೀಮತಿ ಹಚ್.ಆರ್. ಕಡಿಮನಿ ಸೇರಿದಂತೆ ಅನೇಕರು ಇದ್ದರು.

ರಫೀಕ್ ಮುಲ್ಲಾ ಸ್ವಾಗತಿಸಿ, ವಂದಿಸಿದರು.

# ಡಾ. ಬಾಬು ಜಗಜೀವನರಾಮ ಪುಣ್ಯತಿಥಿ ಆಚರಣೆ

ಉದಯರಶ್ಮಿ ನ್ಯೂಸ್




ವಿಜಯಪುರ: ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಡಾ. ಬಾಬು ಜಗಜೀವನರಾಮ ಅವರ ಪುಣ್ಯತಿಥಿ ಪ್ರಯುಕ್ತ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಡಾ. ಬಾಬು ಜಗಜೀವನರಾಮರವರ ವ್ಯಕ್ತಿತ್ವದ ಕುರಿತು ಕಾಂಗ್ರೆಸ್ ಮುಖಂಡರು ಮಾತನಾಡಿ, ಬಾಬು ಜಗಜೀವನರಾಮರವರ ಜೀವನವು ಹಲವಾರು ಆಯಾಮಗಳ ವ್ಯಕ್ತಿತ್ವವನ್ನು ಹೊಂದಿದೆ. ಸಮಾಜಕ್ಕೆ ಸಮಾನತೆಯ ಸಂದೇಶವನ್ನು ಸಾರಿದ ಸಂಪನ್ನ ರಾಜಕಾರಣಿ ಅವರಾಗಿದ್ದರು. ಸುಮಾರು 40 ವರ್ಷಗಳ ಕಾಲ ಸಂಸತ್ತಿನಲ್ಲಿ ಹಲವಾರು ಇಲಾಖೆಗಳ ನಿರ್ವಹಣೆಯನ್ನು ಮಾಡಿದ ಏಕೈಕ ರಾಜಕಾರಣಿಯಾಗಿದ್ದ ಅವರ ವಿಚಾರಗಳ ಕುರಿತು ಸಂಶೋಧನಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮುಖಾಂತರ ಇವರ ತತ್ವಗಳನ್ನು ಪ್ರಸಾರ ಮಾಡುವ ಅಗತ್ಯವಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷರಾದ ಚಾಂದಸಾಬ ಗಡಗಲಾವ, ವೈಜನಾಥ ಕರ್ಪೂರಮಠ, ಸುಭಾಸ ಕಾಲೆಬಾಗ, ಡಾ. ಗಂಗಾಧರ ಸಂಭಣ್ಣಿ, ಮಹಾದೇವ ಜಾಧವ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಸಾಹೇಬಗೌಡ ಬಿರಾದಾರ, ಎಂ.ಎಂ. ಮುಲ್ಲಾ (ದ್ಯಾಬೇರಿ), ವಸಂತ ಹೊನಮೋಡೆ, ಲಾಲಸಾಬ ಕೊರಬು, ಜಮೀರಹ್ಮದ ಬಕ್ಷಿ, ರಿಯಾಜ ನದಾಫ, ತಾಜುದ್ದೀನ ಖಲೀಫಾ, ಫಿರೋಜ ಶೇಖ, ಬಾಬು ಯಾಳವಾರ, ಗಿರೀಶ ಇಟ್ಟಂಗಿ ಮುಂತಾದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಹಿಳೆಯರ ಆರ್ಥಿಕತೆಗೆ ಸಂಘಗಳು ಪೂರಕ :ಪೂಜಾರಿ

ಉದಯರಶ್ಮಿ ನ್ಯೂಸ್




ಚಡಚಣ: ಮಹಿಳೆಯರು ಜೀವನದಲ್ಲಿ ಧೈರ್ಯದಿಂದ ಸಾಗಬೇಕು.ಎಂತಹ ಸಂಕಷ್ಟಗಳು ಸರಾಗವಾಗಿ ಎದುರಿಸುವ ಮನೋಭಾವನೆ ಹೊಂದಬೇಕು. ಅಂದಾಗ ಜೀವನದಲ್ಲಿ ಯಶಸ್ಸು ಕಾಣಬಹುದು ಎಂದು ಕನಕನಾಳ ಭಾಗ್ಯವಂತಿದೇವಿಯ ಧೂಳಿ ರುದ್ರಪ್ಪ ಪೂಜಾರಿ ಹೇಳಿದರು. .

ಪಟ್ಟಣದ ಶಂಕರಲಿಂಗ ದೇವಸ್ಥಾನದ ಆವರಣದಲ್ಲಿ ಜರುಗಿದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ಇಂಡಿಂ-ರುವರ ಆಶ್ರಯದಲ್ಲಿ ಚಡಚಣ ಕೇಂದ್ರದ ವಾರ್ಷಿಕೋತ್ಸವದ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿ, ಮಹಿಳೆಯರ ಆರ್ಥಿಕತೆಗೆ ಇಂತಹ ಸಂಘಗಳು ಪೂರಕ. ಈ ಸಂಘವ ಮಹಿಳೆಯರಿಗಾಗಿ ನಾನಾ ಯೋಜನೆಗಳನ್ನು ಕೈಗೊಂಡು ಮಹಿಳೆ ಅಬಲೆಯಲ್ಲ ಸಬಲೆ ಎನ್ನುವುದನ್ನು ಸಾಬೀತು ಮಾಡಿದೆ ಎಂದರು.

ಮೇಲ್ವಿಚಾರಕ ಜಗದೀಶ ಕುಂಬಾರ ಮಾತನಾಡಿ, ಸಂಘವು ಅಭಿವೃದ್ಧಿಯಾಗಬೇಕಾದರೆ ನಿಮ್ಮೆಲ್ಲರ ಸಹಕಾರ ಮುಖ್ಯ ಎಂದರು.

ಅಖಿಲ ಕರ್ನಾಟಕ ಜ್ಞಾನ ಜಾಗೃತಿ ಜಿಲ್ಲಾ ಸದಸ್ಯ ಶಿವಣ್ಣ ಪಾಂಡ್ರೆ ಮಾತನಾಡಿ, ಧರ್ಮಸ್ಥಳ ಸಂಘ ಸಂಘದಿಂದ ಅನಾಥರಿಗೆ ಬಡವರಿಗೆ ವಸತಿಯೋಜನೆ, ವೃದ್ಧರಿಗೆ

ಮಾಸಾಶನ ಯೋಜನೆ ಮಾಡಿದೆ ಎಂದರು.

ಬಣಗಾರ ಸಮಾಜದ ಮುಖಂಡ ಬಸವರಾಜ ಕರಜಗಿ ಮಾತನಾಡಿ, ಸಂಘವು ಉತ್ತರೋತ್ತರ ಅಭಿವೃದ್ಧಿ ಹೊಂದಿ ಮಹಿಳೆಯರ ಬಾಳಿಗೆ ಬೆಳಕಾಗಲಿ ಎಂದು ಶುಭ ಹಾರೈಸಿದರು.

ವೇದಿಕೆಯ ಮೇಲೆ ಹಿರಿಯ ಪರ್ತಕರ್ತ ಗಂಗಾಧರ ಗಿಡವೀರ, ಚೈತ್ರಾ ಮಠಪತಿ, ಕಮಲಾಬಾಯಿ ಕಠಾರೆ, ಜಯಶ್ರೀ ಮೇಡಂ ಇದ್ದರು. ಪ್ರಾರಂಭದಲ್ಲಿ ಮಂಜುನಾಥನ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.

ಸದಸ್ಯೆಯರ ಕುಂಭಮೇಳವು ಶೋಭೆ ತಂದಿತು.

ಸೇವಾ ಪ್ರತಿನಿಧಿ ಗುರುದೇವಿ ನಿರಾಳೆ ನಿರೂಪಿಸಿದರು. ಬಿಸಿಲ್ಲಾ ನದಾಫ ವಂದಿಸಿದರು. ಕಮಲಾ ಜಂಗಲಗಿ, ಜಗದೇವಿ ವಾಳಿಖಿಂಡಿ, ಸುಜಾತಾ ಜಂಗಲಗಿ, ರಂಜಿತಾ ಗಿಡವೀರ, ಸಂಗೀತಾ, ಸುಪ್ರಿಯಾ, ಜ್ಯೋತಿ ಕಠಾರೆ, ಅಶ್ವಿನಿ ಪೂಜಾರಿ, ವೈಶಾಲಿ ಮುತ್ತಿನ, ಕಮಲಾ ಕುಂಬಾರ, ಲಕ್ಷ್ಮೀ ಕರಜಗಿ , ಕಾಂತವ್ವ , ವಾಳಿಖಿಂಡಿ, ದಾನಮ್ಮ ಅಕ್ಷತಾ, ಕವಿತಾ, ವಿಶಾಲಾಕ್ಷಿ ಸೇರಿದಂತೆ ಎಲ್ಲ ಸದಸ್ಯೆಯರು ಇದ್ದರು.

# ಬಿಎಲ್ಡಿಇ ಡೀಮ್ಡ್ ವಿವಿ & ಹೋಮಿಯೋಪಥಿ ಸಂಶೋಧನೆ ಪರಿಷತ್ ಮಧ್ಯೆ ಒಡಂಬಡಿಕೆ

ಉದಯರಶ್ಮಿ ನ್ಯೂಸ್



ವಿಜಯಪುರ: ನಗರದ ಬಿ.ಎಲ್.ಡಿ.ಇ. ಡೀಮ್ಡ್ ವಿಶ್ವವಿದ್ಯಾಲಯ ಮತ್ತು ಕೇಂದ್ರ ಆಯುಷ್ ಇಲಾಖೆಯ ಹೋಮಿಯೋಪಥಿ ಸಂಶೋಧನೆ ಪರಿಷತ್ತಿನ ಮಧ್ಯೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಬಿ.ಎಲ್.ಡಿ.ಇ ಸಂಸ್ಥೆಯ ಬಿ.ಎಲ್.ಡಿ.ಇ ಸಂಸ್ಥೆಯ ಮುಖ್ಯ ಸಲಹೆಗಾರ ಮತ್ತು ವಿವಿ ರಜಿಸ್ಟಾರ್ ಡಾ. ಆರ್. ವಿ. ಕುಲಕರ್ಣಿ ವಿಶ್ವವಿದ್ಯಾಲಯದಲ್ಲಿ ಬುಧವಾರ ನಡೆದ ಕಾರ್ಯಕ್ರಮದಲ್ಲಿ ವಿವಿಯ ಕುಲಪತಿ ಡಾ. ಆರ್. ಎಸ್. ಮುಧೋಳ ಮತ್ತು ಕೇಂದ್ರ ಆಯುಷ ವಿಭಾಗದ ಹೋಮಿಯೋಪಥಿ ಸಂಶೋಧನೆ ಪರಿಷತ್ತಿನ ಮಹಾನಿರ್ದೇಶಕ ಡಾ. ಸುಭಾಶ ಕೌಶಿಕ ಅವರು ಒಡಂಬಡಿಕೆಗೆ ಸಹಿ ಹಾಕಿದ್ದಾರೆ ಎಂದು ತಿಳಿಸಿದ್ದಾರೆ.

ಈ ಒಡಂಬಡಿಕೆಯಿಂದಾಗಿ ವಿವಿ ಮತ್ತು ಪರಿಷತ್ತಿನ ನಡುವೆ ಪರಸ್ಪರ ಸಹಯೋಗದಲ್ಲಿ ಆರೋಗ್ಯ ವಿಜ್ಞಾನ ಕ್ಷೇತ್ರದ ನಾನಾ ವಿಭಾಗಗಳಲ್ಲಿ ಸಮಗ್ರ ಚಟುವಟಿಕೆ ನಡೆಸಲು ಮತ್ತು ನಾನಾ ಸಾಂಕ್ರಾಮಿಕ ಹಾಗೂ ದೀರ್ಘಕಾಲದ ಕಾಯಿಲೆಗಳನ್ನು ನಿಯಂತ್ರಿಸಲು ಹೊಸ ಸಂಶೋದನೆ ಕೈಗೊಳ್ಳಲು, ವಿಚಾರ ವಿನಿಮಯ ಮಾಡಿಕೊಳ್ಳಲು ಅನುಕೂಲವಾಗಲಿದೆ.

ಈ ಒಡಂಬಡಿಕೆ ಸಂದರ್ಭದಲ್ಲಿ ವಿವಿ ಸಮಕುಲಾಧಿಪತಿ ಡಾ. ಆರ್. ಎಂ. ಜಯರಾಜ, ಸಮಕುಲಪತಿ ಡಾ. ಅರುಣ ಚಂ. ಇನಾಮದಾರ, ವೈದ್ಯಕೀಯ ಕಾಲೇಜಿನ ಪ್ರಾಚಾರ್ಯ ಡಾ. ಅರವಿಂದ ಪಾಟೀಲ, ವಿವಿ ಸಂಶೋಧನೆ ಮತ್ತು ಅಭಿವೃದ್ಧಿ ಕೋಶದ ನಿರ್ದೇಶಕ ಡಾ. ಎಂ. ಎಂ.ಪಾಟೀಲ, ಗೌರವಾನ್ವಿತ ಪೀಠದ ಪ್ರಾಧ್ಯಾಪಕ ಡಾ. ಕುಸಾಲ ಕೆ. ದಾಸ, ಕೇಂದ್ರ ಹೋಮಿಯೋಪಥಿ ಸಂಶೋಧನೆ ಪರಿಷತ್ತಿನ ವಿಜ್ಞಾನಿ ಡಾ. ದೇವದತ್ತ ನಾಯಕ, ಅಲೈಡ್ ಹೆಲ್ತ್ ಸಾಯಿನ್ಸ್ ಡೀನ್ ಎಸ್. ವಿ. ಪಾಟೀಲ, ಐಕ್ಯೂಎಸಿ ನಿರ್ದೇಶಕಿ ಡಾ. ಲತಾ ಮುಳ್ಳೂರ, ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದ ನೊಡಲ್ ಅಧಿಕಾರಿ, ಡಾ. ಈಶ್ವರ ಬಾಗೋಜಿ, ಡಾ. ಚಂದ್ರಕಾ ದೊಡ್ಡಿಹಾಳ, ಚಂದ್ರಮೌಳಿ ರೆಡ್ಡಿ ಮುಂತಾದವರು ಉಪಸ್ಥಿತರಿದ್ದರು.

### ಕಾರ್ಯನಿರತ ಪತ್ರಕರ್ತರ ಸಂಘ & ವಿತರಕರ ಸಂಘದಿಂದ ಪತ್ರಿಕಾ ವಿತರಕ ದಿ.ಮಲ್ಲಪ್ಪ ಮಂಗಾನವರ ಶ್ರದ್ಧಾಂಜಲಿ ಸಭೆ

# ದಿ.ಮಂಗಾನವರ ಕಾಯಕ ನಿಷ್ಠೆ ಪತ್ರಿಕಾ ವಿತರಕರಿಗೆ ಮಾದರಿ :ಚೂರಿ

ಉದಯರಶ್ಮಿ ನ್ಯೂಸ್




ವಿಜಯಪುರ: ಕಳೆದ ಜು.2ರಂದು ನಿಧನರಾದ ನಗರದ ಹಿರಿಯ ಪತ್ರಿಕಾ ವಿತರಕ ಮಲ್ಲಪ್ಪ ಆರ್.ಮಂಗಾನವರ ಅವರ ಶ್ರದ್ಧಾಂಜಲಿ ಸಭೆಯನ್ನು ನಗರದ ಹೊಸ ಪತ್ರಿಕಾ ಭವನದಲ್ಲಿ ಶನಿವಾರ ಆಚರಿಸಲಾಯಿತು.

ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಪತ್ರಿಕಾ ವಿತರಕರ ಸಂಘ ಜಂಟಿಯಾಗಿ ಆಯೋಜಿಸಿದ ಈ ಸಭೆಯಲ್ಲಿ ದಿ.ಮಲ್ಲಪ್ಪ ಮಂಗಾನವರ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಒಂದು ನಿಮಿಷ ಮೌನ ಆಚರಿಸಲಾಯಿತು.

ಈ ವೇಳೆ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಸಂಗಮೇಶ ಚೂರಿ ಮಾತನಾಡಿ, ಪತ್ರಿಕೆಯು ಸುದ್ದಿಮನೆಯಿಂದ ಓದುಗರ ಮನೆ ಬಾಗಿಲಿಗೆ ತಲುಪಲು ಪತ್ರಿಕಾ ವಿತರಕರ ಪಾತ್ರ ದೊಡ್ಡದು. ಈ ವೃತ್ತಿಯಲ್ಲಿ 40ವರ್ಷಕ್ಕೂ ಅಧಿಕ ಕಾಲ ದಣಿವರಿಯದ ಸೇವೆ ಸಲ್ಲಿಸಿದವರು ದಿ.ಮಂಗಾನವರ ಅವರು. ಈ ವೃತ್ತಿಯಿಂದಲೂ ಆರ್ಥಿಕವಾಗಿ ಸಬಲರಾಗಬಹುದು ಎಂದು ಅವರು ತೋರಿಸಿಕೊಟ್ಟರು. ಅವರ ಕಾಯಕ ನಿಷ್ಠೆ ವಿತರಕರಿಗೆ ಮಾದರಿಯಾಗಿದೆ ಎಂದು ಹೇಳಿದರು.

ವಿಜಯ ಕರ್ನಾಟಕ ಪತ್ರಿಕೆ ಪ್ರಸಾರಾಂಗ ವಿಭಾಗದ ರಮೇಶ ವಿಟ್ಲಾಪೂರ ಮಾತನಾಡಿ, ದಿ.ಮಲ್ಲಪ್ಪ ಮಂಗಾನವರ ಅವರು, ಹತ್ತಾರು ಪತ್ರಿಕೆಗಳ ವಿತರಕರಾಗಿ ಎಲ್ಲರಿಗೂ ಪ್ರತಿ ತಿಂಗಳು ನಿಯಮಿತವಾಗಿ ಬಿಲ್ ಪಾವತಿಸುತ್ತಿದ್ದರು. ಹಲವಾರು ನಿರುದ್ಯೋಗಿ ಯುವಕರಿಗೆ ಉದ್ಯೋಗ ಕಲ್ಪಿಸಿಕೊಟ್ಟಿದ್ದ ಅವರು ತಮ್ಮ ವೃತ್ತಿಯಲ್ಲಿ ಎಂದೂ ನಷ್ಟ ಅನುಭವಿಸಲಿಲ್ಲ. ಅವರ ನಿಧನದಿಂದಾಗಿ ಪತ್ರಿಕಾ ವಿತರಕರ ಕ್ಷೇತ್ರ ಬಡವಾಗಿದೆ ಎಂದರು.

ಕಾನಿಪ ಸಂಘದ ಪ್ರ. ಕಾರ್ಯದರ್ಶಿ ಮೋಹನ ಕುಲಕರ್ಣಿ, ಜಿಲ್ಲಾ ಉಪಾಧ್ಯಕ್ಷ ಇಂದುಶೇಖರ ಮಣೂರ, ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ಮಹೇಶ ಶೆಟಗಾರ, ರಾಜ್ಯ ಕಾರ್ಯಕಾರಿಣಿ ಸದಸ್ಯ ಕೆ.ಕೆ. ಕುಲಕರ್ಣಿ, ಕಾರ್ಯದರ್ಶಿ ಅವಿನಾಶ ಬಿದರಿ, ಖಜಾಂಚಿ ರಾಹುಲ್ ಆಪ್ಟೆ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ಗುರು ಗದ್ದನಕೇರಿ, ಬಸವರಾಜ ಉಳ್ಳಾಗಡ್ಡಿ, ವಿನೋದ ಸಾರವಾಡ, ಸುನೀಲ ಕಾಂಬಳೆ, ಸುನೀಲ ಗೋಡೆನ್ನವರ, ಸಂಗಮೇಶ ಉತ್ನಾಳ, ಪತ್ರಿಕಾ ವಿತರಕರ ಸಂಘದ ಅಧ್ಯಕ್ಷ ಗಣೇಶ ರುದ್ರಗಂಟಿ ಸೇರಿದಂತೆ ಹಲವರಿದ್ದರು.

# ದೇವರಹಿಪ್ಪರಗಿ: ಸ್ವಚ್ಛತಾ ಅಭಿಯಾನಕ್ಕೆ ಇಓ ಭಾರತಿ ಚಾಲನೆ

ಉದಯರಶ್ಮಿ ನ್ಯೂಸ್



ದೇವರಹಿಪ್ಪರಗಿ: ತಾಲ್ಲೂಕು ಪಂಚಾಯಿತಿಯಲ್ಲಿ ಶನಿವಾರ ಸ್ವಚ್ಛತಾ ಅಭಿಯಾನಕ್ಕೆ ಇಓ ಭಾರತಿ ಚಲುವಯ್ಯ ಚಾಲನೆ ನೀಡಿದರು.


ಜಿಲ್ಲಾ ಪಂಚಾಯಿತಿ ಆದೇಶದ ಅನ್ವಯ ತಿಂಗಳ ಮೊದಲನೇ ಶನಿವಾರದಂದು ತಾಲ್ಲೂಕಿನ ಕಚೇರಿ ಒಳಗಡೆ ಮತ್ತು ಹೊರಗಡೆ ಸ್ವಚ್ಛತೆ ಕಾಪಾಡುವ ಹಿನ್ನೆಲೆಯಲ್ಲಿ ಸ್ವತ ಇಓ ಅವರು ಪೊರಕೆ ಹಿಡಿದು ಸಿಬ್ಬಂದಿಯೊಂದಿಗೆ ಕಚೇರಿ ಆವರಣವನ್ನು ಸ್ವಚ್ಛಗೊಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಇಓ ಭಾರತಿ ಚಲುವಯ್ಯ, ತಾಲ್ಲೂಕು ಕಚೇರಿ ಒಳಗೊಂಡಂತೆ ಗ್ರಾಮ ಪಂಚಾಯಿತಿಗಳಲ್ಲಿ ಸ್ವಚ್ಛತೆ ಕಾಪಾಡುವ ದೃಷ್ಟಿಯಿಂದ ಪ್ರತಿತಿಂಗಳ ಮೊದಲ ಶನಿವಾರ 2 ಗಂಟೆಗಳ ಕಾಲ ಸ್ವಚ್ಛತಾ ಅಭಿಯಾನವನ್ನು ಹಮ್ಮಿಕೊಳ್ಳಲಾಗುತ್ತಿದೆ. ಕಾರ್ಯಾಲಯದ ಜನಸ್ನೇಹಿ ಕಚೇರಿ ವಾತಾವರಣ ನಿರ್ಮಿಸುವ ಹಿತದೃಷ್ಟಿಯಲ್ಲಿ ಮಾದರಿ ಕಚೇರಿಯನ್ನು ನಿರ್ಮಿಸುವುದು ಈ ಅಭಿಯಾನದ ಉದ್ದೇಶವಾಗಿದೆ. ಈಗಾಗಲೇ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಸ್ವಚ್ಛತಾ ಅಭಿಯಾನವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಪಂಚಾಯತ ರಾಜ್ ಸಹಾಯಕ ನಿರ್ದೇಶಕ ಶಿವಾನಂದ ಮೂಲಿಮನಿ, ಗ್ರಾಮೀಣ ಉದ್ಯೋಗ ಖಾತ್ರಿ ಸಹಾಯಕ ನಿರ್ದೇಶಕ ಶಾಂತಗೌಡ ನ್ಯಾಮಣ್ಣವರ, ತಾಲ್ಲೂಕು ಯೋಜನಾಧಿಕಾರಿ ಶ್ರೀನಿವಾಸ ಪವಾರ, ವಿಷಯ ನಿರ್ವಾಹಕ ಜಿ. ಎಸ್.ರೋಡಗಿ, ಲೆಕ್ಕಾಧಿಕಾರಿ ಬೈರು ಮೂಲಿಮನಿ, ಐಇಸಿ ಸಂಯೋಜಕ ಸಿದ್ದು ಕಾಂಬಳೆ, ಕಿರಣ ಪಾಟೀಲ, ಆನಂದ ಮುದೋಡಗಿ, ಪರಶುರಾಮ ಗುಬ್ಬೇವಾಡ ಹಾಜರಿದ್ದರು.

# ಬಿಜೆಪಿಯಿಂದ ಶ್ಯಾಮ್‌ಪ್ರಸಾದ್ ಮುಖರ್ಜಿ ಜಯಂತಿ ಆಚರಣೆ

ಉದಯರಶ್ಮಿ ನ್ಯೂಸ್



ದೇವರಹಿಪ್ಪರಗಿ: ಶಿಕ್ಷಣತಜ್ಞ ಹಾಗೂ ಜನಸಂಘದ ಸ್ಥಾಪಕ ಶ್ಯಾಮ್‌ಪ್ರಸಾದ್ ಮುಖರ್ಜಿ ಅವರ ಜಯಂತಿ ಅಂಗವಾಗಿ ಬಿಜೆಪಿ ಕಾರ್ಯಕರ್ತರು ಹಾಗೂ ಮಂಡಲ ಯುವಮೋರ್ಚಾ ಪದಾಧಿಕಾರಿಗಳು ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ ಸಸಿಗಳನ್ನು ನೆಟ್ಟು ನೀರುಣಿಸಿದರು.

ಪಟ್ಟಣದ ಇಂಡಿ ರಸ್ತೆಯಲ್ಲಿನ ರೇಣುಕಾಚಾರ್ಯ ಮಂದಿರ ಆವರಣದಲ್ಲಿ ಸೇರಿದ ಬಿಜೆಪಿ ಕಾರ್ಯಕರ್ತರು ಜಿಲ್ಲಾ ಕಾರ್ಯದರ್ಶಿ ರಮೇಶ ಮಸಬಿನಾಳ ಹಾಗೂ ತಾಲ್ಲೂಕು ಜಂಗಮಾಭಿವೃದ್ಧಿ ಸಂಘದ ಅಧ್ಯಕ್ಷ ಸೋಮಶೇಖರ ಹಿರೇಮಠ ನೇತೃತ್ವದಲ್ಲಿ ಶ್ಯಾಮ್‌ಸುಂದರ್ ಮುಖರ್ಜಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆಗೈದು ಪೂಜೆ ಸಲ್ಲಿಸಿದರು.

ನಂತರ ದೇವಸ್ಥಾನದ ಆವರಣದಲ್ಲಿ ಸಸಿಗಳನ್ನು ನೆಟ್ಟು ನೀರುಣಿಸಿದರು.

ಬಿಜೆಪಿ ಯುವಮೋರ್ಚಾ ಉಪಾಧ್ಯಕ್ಷ ಕಲ್ಮೇಶ ಬುದ್ನಿ, ಪ್ರಧಾನ ಕಾರ್ಯದರ್ಶಿ ಶಿವರಾಜ್ ತಳವಾರ, ಹಿಂದುಳಿದ ವರ್ಗಗಳ ಮೋರ್ಚಾ ಪ್ರಧಾನ ಕಾರ್ಯದರ್ಶಿ ರಮೇಶ ಈಳಗೇರ, ರಾವುತ ಅಗಸರ, ಸೋಮು ದೇವೂರ, ಚಂದ್ರಶೇಖರ ದಾನಗೊಂಡ, ಶ್ರೀಶೈಲ ಯಂಭತ್ನಾಳ, ಚಿದಾನಂದ ಕುಂಬಾರ, ಮಹಾಂತೇಶ ಬಿರಾದಾರ, ಬಾಪುಗೌಡ ಪಾಟೀಲ ಇದ್ದರು.

# ವಿಜಯಪುರ: ಜು.11ರಂದು ಉದ್ಯೋಗಮೇಳ

ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಹಾಗೂ ಸಿಕ್ಯಾಬ್ ಸಂಸ್ಥೆಯ ಮಲಿಕ್ ಸಂದಲ್ ಪಾಲಿಟೆಕ್ನಿಕ್ ಇವರ ಸಹಯೋಗದೊಂದಿಗೆ ಜುಲೈ 11 ರಂದು ಬೆಳಿಗ್ಗೆ 10 ಗಂಟೆಗೆ ಬಾಗಲಕೋಟೆ ರಸ್ತೆಯಲ್ಲಿರುವ ಸಿಕ್ಯಾಬ್‌ನ ಮಲಿಕ್ ಸಂದಲ್ ಪಾಲಿಟೆಕ್ನಿಕ್ ಕಾಲೇಜಿನ ಆವರಣದಲ್ಲಿ ಬೆಂಗಳೂರಿನ ಪ್ರತಿಷ್ಠಿತ ಎಂ-ಎನ್‌ಸಿ ಕಂಪನಿಗಳು ಹಾಗೂ ಸ್ಥಳೀಯ ಖಾಸಗಿ ಕಂಪನಿಗಳಿಂದ ನೇಮಕಾತಿಗಾಗಿ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

ಉದ್ಯೋಗ ಮೇಳದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೋಮಾ, ಹಾಗೂ ಯಾವುದೇ ಪದವಿ ಪಾಸಾದ 35 ವರ್ಷ ವಯೋಮಾನದ ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳು ತಮ್ಮ ಶಾಲಾ ದಾಖಲಾತಿಗಳ ಸಹಿತ ಸ್ವವಿವರ, ಆಧಾರ ಕಾರ್ಡಗಳ ಎರಡು ಸೆಟ್ ಝರಾಕ್ಸನೊಂದಿಗೆ ಭಾಗವಹಿಸಬಹುದಾಗಿದ್ದು, ಹೆಚ್ಚಿನ ಮಾಹಿತಿಗಾಗಿ ದೂರವಾಣಿ (ಮೊ:7760944286) ಹಾಗೂ (ಮೊ:9945000793) ಹಾಗೂ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಸಂಪರ್ಕಿಸುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದ್ರಾಕ್ಷಿ ಬೆಳೆ: ವಿಮೆ ನೋಂದಣಿಗೆ ಸೂಚನೆ

ಉದಯರಶ್ಮಿ ನ್ಯೂಸ್

ವಿಜಯಪುರ: 2024-25ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಗೆ ದ್ರಾಕ್ಷಿ ಬೆಳೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು (ಆರ್‌ಡಬ್ಲುಬಿಸಿಐ-ಎಸ್) ಅನುಷ್ಠಾನಗೊಳಿಸಲು ಅಧಿಸೂಚಿಸಲಾಗಿದ್ದು, ಬೆಳೆ ಸಾಲ ಪಡೆದ ರೈತರು ಹಾಗೂ ಬೆಳೆ ಸಾಲ ಪಡೆಯದೆ ಇರುವ ರೈತರು ತಮ್ಮ ಆಧಾರ ಕಾರ್ಡ ಝರಾಕ್ಸ, ಪಹಣಿ ಪತ್ರಿಕೆ ಹಾಗೂ ಬ್ಯಾಂಕ್ ಪಾಸ್ ಬುಕ್ ಪ್ರತಿಯೊಂದಿಗೆ ಹತ್ತಿರದ ಬ್ಯಾಂಕುಗಳಲ್ಲಿ, ಗ್ರಾಮ ಒನ್ ಕೇಂದ್ರ ಅಥವಾ ಸಿಎಸ್‌ಸಿ ಸೆಂಟರ್‌ಗಳಲ್ಲಿ ವಿಮಾ ಯೋಜನೆಯಡಿ ನೋಂದಾಯಿಸಿಕೊಳ್ಳುವಂತೆ ಜಿಲ್ಲಾ ತೋಟಗಾರಿಕೆ ಉಪ ನಿರ್ದೇಶಕರು ಕೋರಿದ್ದಾರೆ.

ದ್ರಾಕ್ಷಿ ಬೆಳೆ ವಿಮೆ ನೋಂದಾಯಿಸಿಕೊಳ್ಳಲು ಜುಲೈ 15 ಕೊನೆಯ ದಿನವಾಗಿದೆ. ರೈತರು ರೂ. 14,000 ವಿಮಾ ಕಂತಿನ ಮೊತ್ತ ಪಾವತಿಸಬೇಕಾಗಿದ್ದು, ಕಡ್ಡಾಯವಾಗಿ ಎಫ್‌ಐಡಿ ಹಾಗೂ ಎನ್‌ಪಿಸಿಐ ಸೀಡಿಂಗ್ ಮಾಡಿಸಿರಬೇಕು.

ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಇಲಾಖೆ, ರೈತ ಸಂಪರ್ಕ ಕೇಂದ್ರದ ಅಧಿಕಾರಿ ಹಾಗೂ ಹತ್ತಿರದ ಬ್ಯಾಂಕ್ ಶಾಖೆ, ಕುಮಾರಿ ಪವಿತ್ರಾ ಅಗ್ರಿಕಲ್ಚರ್ ಇನ್ಸುರೆನ್ಸ್ ಕಂಪನಿ ವಿಮಾ ಸಂಸ್ಥೆಯ ಪ್ರತಿನಿಧಿ ಮೊಬೈಲ್ ನಂ: 8899887873, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ವಿಜಯಪುರ - ಮೊ: 9535185999, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಇಂಡಿ  ಮೊ: 9008404041, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಸಿಂದಗಿ- ಮೊ: 8197464675, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಬ.ಬಾಗೇವಾಡಿ - ಮೊ: 9845215362, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಮುದ್ದೇಬಿಹಾಳ - ಮೊ.8123686903 ಇವರನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಎನ್.ಜಯದೇವನಾಯ್ಕ ಅಧಿಕಾರಿಗಳಿಗೆ ಸೂಚನೆ

# ಸರ್ಕಾರದ ಸೌಲಭ್ಯ ತಲುಪಿಸಿ ತಾಂಡಾಗಳ ಅಭಿವೃದ್ಧಿಗೆ ಒತ್ತು ನೀಡಿ

ಉದಯರಶ್ಮಿ ನ್ಯೂಸ್



ವಿಜಯಪುರ: ಅತಿ ಹೆಚ್ಚು ತಾಂಡಾಗಳನ್ನು ಹೊಂದಿರುವ ವಿಜಯಪುರ ಜಿಲ್ಲೆಯಲ್ಲಿನ ತಾಂಡಾಗಳಲ್ಲಿ ವಾಸಿಸುತ್ತಿರುವ ಜನರ ಜೀವನಮಟ್ಟ, ಶೈಕ್ಷಣಿಕ ಸುಧಾರಣೆಗೆ ಸರ್ಕಾರ ಜಾ–ರಿಗೊಳಿಸಿರುವ ಯೋಜನೆಗಳ ಲಾಭ ದೊರಕಿಸಲು ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಿ ಜನರಿಗೆ ಸವಲತ್ತುಗಳನ್ನು ದೊರಕಿಸುವಂತೆ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಎನ್. ಜಯದೇವನಾಯ್ಕ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶನಿವಾರ ಜಿಲ್ಲಾಧಿಕಾ–ರಿಗಳ ಕಚೇರಿ ಸಭಾಂಗಣದಲ್ಲಿ ತಾಂಡಾಗಳಲ್ಲಿರುವ ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವ ಕುರಿತು ಆಯೋಜಿಸಲಾದ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ತಾಂಡಾಗಳಲ್ಲಿನ ಜನರ ಆರೋಗ್ಯ ಹಿತದೃಷ್ಟಿಯಿಂದ ಕಾಲಕಾಲಕ್ಕೆ ಆರೋಗ್ಯ– ವೈದ್ಯಕೀಯ ಶಿಬಿರಗಳನ್ನು ಆಯೋಜಿಸಿ ಜಾಗೃತಿ ಮೂಡಿಸಬೇಕು. ಅಧಿಕಾರಿಗಳು ಕಾಲಕಾಲಕ್ಕೆ ತಾಂಡಾಗಳಿಗೆ ಭೇಟಿ ನೀಡಿ, ಗಂಭೀರವಾದಂತಹ ಕಾಯಿಲೆಗಳಿಂದ ರಕ್ಷಿಸಿಕೊಳ್ಳುವ ಕುರಿತು ಜನರಲ್ಲಿ ಸೂಕ್ತ ತಿಳುವಳಿಕೆ ಮೂಡಿಸುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪ್ರಾಥಮಿಕ ಶಿಕ್ಷಣ ಮಕ್ಕಳ ಭವಿಷ್ಯಕ್ಕೆ ಭದ್ರ ಬುನಾದಿಯಾಗಿದ್ದು, ಈ ನಿಟ್ಟಿನಲ್ಲಿ ಶಿಕ್ಷಣಕ್ಕೆ ವಿಶೇಷ ಆದ್ಯತೆ ನೀಡಬೇಕು. ಮಕ್ಕಳ ಶೈಕ್ಷಣಿಕ ಭವಿಷ್ಯ ರೂಪಿಸುವಲ್ಲಿ ಶಿಕ್ಷಣ ಇಲಾಖೆ ಪಾತ್ರ ಅತಿ ಮುಖ್ಯವಾಗಿರುವುದರಿಂದ ತಾಂಡಾಗಳಲ್ಲಿ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗದಂತೆ ಶಿಕ್ಷಕರ ಕೊರತೆಯಾಗದಂತೆ ನೋಡಿಕೊಂಡು ಶಿಕ್ಷಕರ ನಿಯೋಜನೆಗೆ ಕ್ರಮ ವಹಿಸಬೇಕು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ಕ್ರಮ ವಹಿಸಬೇಕು. ಕನ್ನಡ, ಇಂಗ್ಲಿಷ್ ಭಾಷೆಗಳ ವ್ಯಾಕರಣ ಕಲಿಯುವಿಕೆ ತರಬೇತಿಗಳನ್ನು ಹಮ್ಮಿಕೊಳ್ಳಬೇಕು ಮಕ್ಕಳಿಗೆ ಪ್ರಾಥಮಿಕ ಹಂತದಲ್ಲಿಯೇ ಮುಖ್ಯ ವಿಷಯಗಳಲ್ಲಿ ಮಕ್ಕಳಿಗೆ ಕರಗತಗೊಳಿಸುವ ಮೂಲಕ ಅವರನ್ನು ಉತ್ತೇಜಿಸಬೇಕು ಎಂದು ಅವರು ಸೂಚನೆ ನೀಡಿದರು.

ಸಭೆಯಲ್ಲಿದ್ದ ಸಾರ್ವಜನಿಕ ಶಿಕ್ಷಣ ಇಲಾಖೆಯ ಶಿಕ್ಷಣಾಧಿಕಾರಿ ಅಶೋಕ ಲಿಮಕರ ಅವರು ಸಭೆಗೆ ಮಾಹಿತಿ ನೀಡಿ, ಈಗಾಗಲೇ ಜಿಲ್ಲೆಯಲ್ಲಿ ಮಿಷನ್ ವಿದ್ಯಾಪುರ ಯೋಜನೆ ಅನುಷ್ಠಾನಗೊಳಿಸಿ, ಆನ್‌ಲೈನ್ ಮೂಲಕ ಸಂಜೆ ಸಮಯದಲ್ಲಿ ವಿದ್ಯಾರ್ಥಿಗಳಿಗೆ ಪ್ರಮುಖ ವಿಷಯಗಳ ಕುರಿತು ಪಾಠ ಬೋಧನೆ ಮಾಡುವ ಮೂಲಕ ಗುಣಮಟ್ಟದ ಶಿಕ್ಷಣ ಒದಗಿಸಲು ಪ್ರಥಮಾದ್ಯತೆ ನೀಡಲಾಗಿದೆ ಎಂದು ಮಾಹಿತಿ ನೀಡಿದರು.

ವಸತಿ ನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಹಾರ, ಶಿಕ್ಷಣ ಒದಗಿಸಲು ಆದ್ಯತೆ ನೀಡಬೇಕು. ಸಂಬಂಧಿಸಿದ ಅಧಿಕಾರಿಗಳು ಕಾಲಕಾಲಕ್ಕೆ ವಸತಿ ನಿಲಯಗಳಿಗೆ ಭೇಟಿ ನೀಡಿ ಗುಣಮಟ್ಟದ ಆಹಾರ, ಮೂಲಭೂತ ಸೌಕರ್ಯಗಳನ್ನು ಒದಗಿಸುತ್ತಿರುವ ಕುರಿತು ಖಚಿತಪಡಿಸಿಕೊಳ್ಳಬೇಕು. ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಶಾಲಾ ಸಮಯಕ್ಕನುಗುಣವಾಗಿ ಸಾರಿಗೆ ಬಸ್‌ಗಳ ವ್ಯವಸ್ಥೆ ಕಲ್ಪಿಸಬೇಕು. ತಾಂಡಾಗಳಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಣಕ್ಕೆ ಒತ್ತು ನೀಡುವ ನಿಟ್ಟಿನಲ್ಲಿ ಅಂಗನವಾಡಿ ಕೇಂದ್ರಗಳ ಸ್ಥಾಪನೆಗೆ ಕ್ರಮ ವಹಿಸಬೇಕು ಎಂದು ಅವರು ಸೂಚನೆ ನೀಡಿದರು.

ತಾಂಡಾಗಳನ್ನು ಕಂದಾಯ ಗ್ರಾಮವನ್ನಾಗಿ ಪರಿವರ್ತಿಸಲು ಅಧಿಕಾರಿ, ಸಿಬ್ಬಂದಿಗಳು ಇ–ಸ್ವತ್ತು ನೋಂದಣಿ ಮಾಡಲು ತಾಂಡಗಳಿಗೆ ತೆರಳಬೇಕು. ಸರ್ಕಾರ ನಿಗಧಿಪಡಿಸಿದ ಶುಲ್ಕದಲ್ಲಿ ಇ–ಸ್ವತ್ತು ನೊಂದಣಿಗೆ ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಗಂಗಾ ಕಲ್ಯಾಣ ಯೋಜನೆಗಳ ಫಲಾನುಭವಿಗಳಿಗೆ ಸಮರ್ಪಕವಾಗಿ ವಿದ್ಯುತ್ ಸಂಪರ್ಕ, ನಿರಂತರ ಜ್ಯೋತಿ ವಿದ್ಯುತ್ ಪೂರೈಸುವಂತೆ ಸೂಚಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಹೆಸ್ಕಾಂ ಅಧಿಕಾರಿ ಈಗಾಗಲೇ ಅರ್ಹ ಫಲಾನುಭವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. ಇನ್ನುಳಿದ ಫಲಾನುಭವಿಗಳಿಗೆ ಯೋಜನೆ ಒದಗಿಸಲು ಪ್ರಕ್ರಿಯೆ ನಡೆದಿದೆ ಎಂದು ಮಾಹಿತಿ ನೀಡಿದರು.

ತಾಂಡಾಗಳಲ್ಲಿ ಸಮರ್ಪಕ ಕುಡಿಯುವ ನೀರಿನ ಘಟಕ, ರಸ್ತೆ, ಬಸ್ ಸೌಕರ್ಯ, ಬೀದಿ ದೀಪಗಳ ನಿರ್ವಹಣೆ ಸೇ–ರಿದಂತೆ ಎಲ್ಲ ಮೂಲಭೂತ ಸೌಲಭ್ಯಗಳನ್ನು ದೊರಕಿಸಲು ಅಧಿಕಾರಿಗಳು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು. ಗರ್ಭಿಣಿಯರು, ಬಾಣಂತಿಯರು ಹಾಗೂ ಮಕ್ಕಳು ಅಪೌಷ್ಠಿಕತೆಯಿಂದ ಬಳಲದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು. ಸರಕಾರ ಅನ್ನಭಾಗ್ಯ ಸೇರಿದಂತೆ ವಿವಿಧ ಯೋಜನೆಗಳನ್ನು ಜಾರಿಗೊಳಿಸಿದ್ದು, ಯಾವುದೇ ಕಾರಣಕ್ಕೂ ಸರಕಾರದ ಯೋಜನೆಗಳ ಸೌಲಭ್ಯಗಳಿಂದ ಅರ್ಹರು ವಂಚಿತರಾಗದಂತೆ ನೋಡಿಕೊಂಡು ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ಸರ್ಕಾರದ ಸೌಲತ್ತುಗಳನ್ನು ಜನರಿಗೆ ದೊರಕಿಸಿ ಅನುಕೂಲ ಕಲ್ಪಿಸಬೇಕು. ಜಿಲ್ಲೆಯಲ್ಲಿನ ತಾಂಡಾಗಳಿಗೆ ಲಿಂಕ್ ರಸ್ತೆ, ಶುದ್ಧ ಕುಡಿಯುವ ನೀರಿನ ಘಟಕ, ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆ, ಸಾರಿಗೆ ಸೌಕರ್ಯ, ಶಿಕ್ಷಕರ ಕೊರತೆ, ಶಿಕ್ಷಣ ಗುಣಮಟ್ಟಕ್ಕೆ ಒತ್ತು, ಬೀದಿ ದೀಪ ನಿರ್ವಹಣೆ, ವಿದ್ಯುತ್ ಸಂಪರ್ಕ, ಅಂಗನವಾಡಿಗಳ ಕಾರ್ಯನಿರ್ವಹಣೆ, ನಿರಂತರ ಜ್ಯೋತಿ ಸಂಪರ್ಕ, ಗಂಗಾ ಕಲ್ಯಾಣ ಬೊರವೆಲ್‌ಗಳಿಗೆ ವಿದ್ಯುತ್ ಸಂಪರ್ಕ ಸೇರಿದಂತೆ ವಿಶೇಷ ಗಮನ ಹರಿಸಿ ತಾಂಡಾಗಳ ಅಭಿವೃದ್ಧಿಗಾಗಿ ಅಗತ್ಯ ಕ್ರಮ ವಹಿಸುವಂತೆ ಅವರು ಸೂಚಿಸಿದರು.

ಜಿಲ್ಲಾಧಿಕಾರಿ ಟಿ.ಭೂಬಾಲನ್ ಮಾತನಾಡಿ, ಜಿಲ್ಲೆಯಲ್ಲಿರುವ ಎಲ್ಲ ತಾಂಡಾಗಳಲ್ಲಿ ಸಮರ್ಪಕವಾಗಿ ಕಾರ್ಯನಿರ್ವಹಿಸುವ ಮೂಲಕ ಜಿಲ್ಲೆಯಲ್ಲಿರುವ ತಾಂಡಾಗಳ ಮಾಹಿತಿ, ಹಾಗೂ ತಾಂಡಾ ಅಭಿವೃದ್ಧಿಗಾಗಿ ಕೈಗೊಂಡಿರುವ ಕಾಮಗಾರಿಗಳ ಮಾಹಿತಿಯನ್ನು ಒಂದು ವಾರದೊಳಗೆ ಸಿದ್ಧಪಡಿಸಿಕೊಂಡು ಜಿಲ್ಲಾಡಳಿತಕ್ಕೆ ಸಲ್ಲಿಸುವಂತೆ ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಸಭೆಗೆ ಕಂದಾಯ ಗ್ರಾಮಗಳಿಗೆ ಸೇ–ರಿದ ತಾಂಡಾಗಳ ಬಗ್ಗೆ ಮಾಹಿತಿ ನೀಡಿದರು.

ಸಭೆಯಲ್ಲಿ ವಿಜಯಪುರ ಉಪವಿಭಾಗಾಧಿಕಾರಿ ಬಸವಣ್ಣೆಪ್ಪ ಕಲಶೆಟ್ಟಿ, ಇಂಡಿ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ, ಹೆಸ್ಕಾಂನ ಅಧೀಕ್ಷಕ ಅಭಿಯಂತರ ಸಿದ್ದಪ್ಪ ಬಿಂಜಗೇರಿ, ಕೆಕೆಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ದೇವಾನಂದ ಬಿರಾದಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಕೆ.ಕೆ.ಚವ್ಹಾಣ, ಭೂದಾಖಲೆಗಳ ಇಲಾಖೆ ಉಪನಿರ್ದೇಶಕ ಮಹಾಂತೇಶ ಮುಳಗುಂದ, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಜು.13 ರಂದು ಪತ್ರಿಕಾ ದಿನಾಚರಣೆ ಆಚರಿಸಲು ಕಾನಿಪ ನಿರ್ಧಾರ

ಉದಯರಶ್ಮಿ ನ್ಯೂಸ್



ವಿಜಯಪುರ: ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದಲ್ಲಿ ಜು.13 ರಂದು ನಗರದಲ್ಲಿ ಪತ್ರಿಕಾ ದಿನಾಚರಣೆ, ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಜಿಲ್ಲೆಯ ಹಿರಿಯ ಪತ್ರಕರ್ತರಿಗೆ ಸನ್ಮಾನ ಸಮಾರಂಭ ಹಮ್ಮಿಕೊಳ್ಳಲು ನಿರ್ಧರಿಸಲಾಯಿತು.

ಶನಿವಾರ ನಗರದ ಜಿಪಂ ಕಚೇರಿ ಬಳಿಯ ಪತ್ರಿಕಾ ಭವನದಲ್ಲಿ ಕಾನಿಪ ಜಿಲ್ಲಾಧ್ಯಕ್ಷ ಸಂಗಮೇಶ ಚೂರಿ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಕಾನಿಪ ಜಿಲ್ಲಾ ಕಾರ್ಯಕಾರಿಣಿ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಯಿತು.

ಸಮಾರಂಭವನ್ನು ಅಚ್ಚುಕಟ್ಟಾಗಿ, ಅರ್ಥಪೂರ್ಣವಾಗಿ ಆಯೋಜಿಸಲು ಸಭೆಯಲ್ಲಿ ನಿರ್ಧರಿಸಲಾಯಿತಲ್ಲದೆ, ಅದಕ್ಕಾಗಿ ವಿವಿಧ ಸಮಿತಿಗಳನ್ನು ರಚಿಸಲಾಯಿತು.

ಕಾರ್ಯಕ್ರಮಕ್ಕೆ ಜಿಲ್ಲೆಯ ಸಚಿವರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಜಿಲ್ಲಾಧಿಕಾರಿ, ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಅವರನ್ನು ಆಹ್ವಾನಿಸಲು ತೀರ್ಮಾನಿಸಲಾಯಿತು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ, ಕಾನಿಪ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ, ಪ್ರಧಾನ ಕಾರ್ಯದರ್ಶಿ ಜೆ.ಸಿ.ಲೋಕೇಶ, ಜಿಲ್ಲಾ ಉಸ್ತುವಾರಿ ಪುಂಡಲೀಕ ಬಾಳೋಜಿ ಅವರ ಉಪಸ್ಥಿತಿಯಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲು ಸಭೆ ತೀರ್ಮಾನಿಸಿತು.

ಕಾನಿಪ ಸಂಘದ ಜಿಲ್ಲಾ ಉಪಾಧ್ಯಕ್ಷ ಇಂದುಶೇಖರ ಮಣೂರ ಸಭೆಯ ತೀರ್ಮಾನಗಳ ಕುರಿತು ವಿವರಿಸಿದರು. ಪ್ರಧಾನ ಕಾರ್ಯದರ್ಶಿ ಮೋಹನ ಕುಲಕರ್ಣಿ ಸ್ವಾಗತಿಸಿದರು.

ಸಭೆಯಲ್ಲಿ ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ಮಹೇಶ ಶೆಟಗಾರ, ರಾಜ್ಯ ಕಾರ್ಯಕಾ–ರಿಣಿ ಸದಸ್ಯ ಕೆ.ಕೆ.ಕುಲಕರ್ಣಿ, ಕಾರ್ಯದರ್ಶಿ ಅವಿನಾಶ ಬಿದರಿ, ಖಜಾಂಚಿ ರಾಹುಲ್ ಆಪ್ಟೆ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ಅಶೋಕ ಯಡಹಳ್ಳಿ, ಗುರು ಗದ್ದನಕೇರಿ, ಬಸವರಾಜ ಉಳ್ಳಾಗಡ್ಡಿ, ವಿನೋದ ಸಾರವಾಡ, ಸುನೀಲ ಕಾಂಬಳೆ, ಸುನೀಲ ಗೋಡೆನ್ನವರ ಹಾಗೂ ದೇವರಹಿಪ್ಪರಗಿ ತಾಲೂಕು ಘಟಕ ಅಧ್ಯಕ್ಷ ಸಂಗಮೇಶ ಉತ್ನಾಳ ಸಮಾರಂಭದ ಯಶಸ್ಸಿಗೆ ಸಲಹೆ–ಸೂಚನೆ ನೀಡಿದರು.

# ಕಾಶಿಬಾಯಿ ರಾಠೋಡ್ ಸೇವೆ ಸ್ಮರಣೀಯ :ಡಾ.ಸಂಜಯ್

ಉದಯರಶ್ಮಿ ನ್ಯೂಸ್



ಕೆಂಭಾವಿ: ಕೆಲಸಕ್ಕೆ ಸೇರಿದ ದಿನವೇ ನಮ್ಮ ವಿಶ್ರಾಂತಿ ದಿನ ನಿಗದಿಯಾಗಿರುತ್ತದೆ. ಸುರಕ್ಷಾಧಿಕಾರಿ ಕಾಶಿಬಾಯಿ ರಾಠೋಡ್ ಅವರ ವಿಶ್ರಾಂತಿ ಜೀವನ ಸುಖಕರವಾಗಿರಲಿ ಎಂದು ವೈದ್ಯಾಧಿಕಾರಿ ಡಾ. ಸಂ–ಜಯ ಚಂದಾನವರ ಹೇಳಿದರು.

ಪಟ್ಟಣದ ಸಮೀಪದ ನಗನೂರ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಆಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಕಾಶಿಬಾಯಿ ರಾಠೋಡ್ ಅವರ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗ್ರಾಮಕ್ಕೆ ಬಸ್ ಸೌಕರ್ಯ ಇಲ್ಲದಂತಹ ಸಂದರ್ಭದಲ್ಲಿ ಕಾಲ್ನಡಿಗೆಯಲ್ಲಿ ಹಳ್ಳಿಗಳಿಗೆ ಹೋಗಿ ಸೇವೆ ಸಲ್ಲಿಸಿದ್ದಾರೆ. ಅವರ ಸೇವೆ ಇತರರಿಗೆ ಮಾದರಿಯಾಗಿದೆ ಎಂದರು.

ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಶಂಕ್ರಣ್ಣ ವಣಿಕ್ಯಾಳ ಮಾತನಾಡಿ, ಸೇವೆಯಲ್ಲಿ ಇದ್ದಷ್ಟು ದಿನ ವೃತ್ತಿಗೆ ಧಕ್ಕೆಯುಂಟು ಬಾರದಂತೆ ಕೆಲಸ ಮಾಡಿದಾಗ ಸಮಾಜದಲ್ಲಿ ಗೌರವ ಹೆಚ್ಚುತ್ತದೆ. ಕಾಶಿಬಾಯಿ ರಾಠೋಡ್ ಅವರು ತಮ್ಮ ಸೇವಾ ಅವಧಿಯ 38 ವರ್ಷಗಳ ಕಾಲ ಉತ್ತಮ ಸೇವೆ ಸಲ್ಲಿಸಿ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ ಎಂದು ಹೇಳಿದರು.

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಹಳ್ಳೆಪ್ಪ ಹವಲ್ದಾರ

ರೈತ ಕೃಷಿ ಕಾರ್ಮಿಕ ಸಂಘಟನೆಯ ಜಿಲ್ಲಾಧ್ಯಕ್ಷ ಶರಣಗೌಡ ಗೂಗಲ್

ಡಾ. ಸುನೀಲ್ ಕುಮಾರ ಗಿಂಡಿ, ಕೆಂಭಾವಿ ವೈದ್ಯಾಧಿಕಾರಿ ಡಾ. ಗೀರೀಶ ಕುಲಕರ್ಣಿ, ಕರೆಪ್ಪ ದರ್ಶನಾಪುರ, ಮಾತನಾಡಿ ಶುಭಹಾರೈಸಿದರು.

ಪೂಜ್ಯ ಖಂಡಪ್ಪ ತಾತಾ, ವೀರಯ್ಯಸ್ವಾಮಿ ಸ್ಥಾವರಮಠ, ಸಾನಿಧ್ಯ ವಹಿಸಿದ್ದರು. ಗ್ರಾಮ ಪಂಚಾಯಿತಿ ಅಧ್ಯಕ್ಷ ಶಿವಶರಣರೆಡ್ಡಿ ಕೆಂಚಾಗೋಳ, ಮುಖಂಡರಾದ ಅಶೋಕ ಸಾಹು ಗೂಗಲ್, ಶರಣಪ್ಪ ದೇಶಪಾಂಡೆ, ಚನ್ನಾರೆಡ್ಡಿ ದೇಸಾಯಿ, ಡಾ. ಇಮ್ತಿಯಾಜ್ ಅಹ್ಮದ್, ಎಲ್‌ಎಚ್‌ವಿ ಉಮಾದೇವಿ, ಸಿಬ್ಬಂದಿಗಳಾದ ಸಮೀರ ಅಹ್ಮದ ಗುಂದಗಿ, ಬಸವರಾಜ ಚಬನೂರ, ರತ್ನಮ್ಮ ಕಂದಳ್ಳಿ, ಕುಸುಮಾವತಿ ಬಿರಾದಾರ, ಉಮಾ ರಾಠೋಡ್, ಅಬ್ದುಲ್ ಲತೀಫ್, ಸಂತೋಷ್ ರಾಠೋಡ್, ಪ್ರಕಾಶ ಬಿರಾದಾರ ಸೇರಿದಂತೆ ಇತರರಿದ್ದರು. ಡಾ. ಯಂಕನಗೌಡ ಪೊಲೀಸ್ ಪಾಟೀಲ ನಿರೂಪಿಸಿದರು. ಮಹ್ಮದ್ ಇಲಿಯಾಸ್ ವಡಕೇರಿ ಸ್ವಾಗತಿಸಿದರು. ಶಂಕರಗೌಡ ಬಿರಾದಾರ, ವಂದಿಸಿದರು.

# ಸ್ವಂತಿಯ (SELFI) ಮೋಹ.. ಜೀವಕ್ಕೆ ಅಪಾಯ

ಉದಯರಶ್ಮಿ ದಿನಪತ್ರಿಕೆ

ವೀಣಾಂತರಂಗ



–ವೀಣಾ ಎಚ್. ಪಾಟೀಲ್, ಮುಂಡರಗಿ

ಯಾರೋ ಒಬ್ಬ ಹೆಣ್ಣು ಮಗಳು ರೈಲು ಹಳಿಯ ಬಳಿ ನಿಂತು ಸೆಲ್ಫಿ ತೆಗೆದುಕೊಳ್ಳಲು ಹೋದಾಗ ರೈಲಿನ ಒಂದು ತೆರೆದ ಭಾಗ ಆಕೆಗೆ ಬಡಿದು ಆಕೆ ಕ್ಷಣಮಾತ್ರದಲ್ಲಿ ರೈಲಿನ ಗಾಲಿಗಳಡಿಯಲ್ಲಿ ಸಿಲುಕಿ ಸತ್ತುಹೋದಳು. ಆಕೆಯ ಹತ್ತಿರದ ಸ್ನೇಹಿತೆ ಜೋರಾಗಿ ಕಿರುಚಿ ಅಳುತ್ತಿದ್ದರೆ, ವಿಡಿಯೋ ರೆಕಾರ್ಡಿಂಗ್ ಮಾಡಿ ಸಾಮಾಜಿ–ಕ ಜಾಲತಾಣಗಳಲ್ಲಿ ಅಪ್ಲೋಡ್ ಮಾಡಲು ಬಂದಿದ್ದ ಸ್ನೇಹಿತರ ಗುಂಪು ಆಕೆಯನ್ನು ರಕ್ಷಿಸಲು ಸಾಧ್ಯವಾಗದೆ ಅಸಹಾಯಕರಾಗಿ ನಿಂತು ನೋಡುತ್ತಿದ್ದರು.

ಮತ್ತೊಂದು ಘಟನೆಯಲ್ಲಿ ತನ್ನ ಸ್ನೇಹಿತರೊಂದಿಗೆ ಟ್ರೆಕ್ಕಿಂಗ್ ಹೋಗಿದ್ದ ಮಿಲಿಟರಿ ಯೋಧನೊಬ್ಬ ತನ್ನ ವಿಡಿಯೋ ಮಾಡಲು ಹೇಳಿ ಮಡುವಿನಲ್ಲಿ ಹಾರಿದನು. ಆದರೆ ನೀರಿನ ಆಳ, ಅಗಲ ಮತ್ತು ರಭಸದ ಅರಿವಿಲ್ಲದೆ ಪ್ರವಾಹದೊಂದಿಗೆ ತಳ್ಳಲ್ಪಟ್ಟಾಗ ಬಂಡೆಗಲ್ಲೊಂದನ್ನು ಹಿಡಿಯಲು ಪ್ರಯತ್ನಿಸಿದರೂ ಸಾಧ್ಯವಾಗದೆ ನೀರಿನ ರಭಸಕ್ಕೆ ಕೊಚ್ಚಿ ಹೋಗಿ ಜಲ ಸಮಾಧಿಯಾದನು. ಪೊಲೀಸ್ ಇಲಾಖೆಯ ಸತತ ಪ್ರಯತ್ನದಿಂದ ಎರಡು ದಿನಗಳ ನಂತರ ಆತನ ಹೆಣ ದೊರೆಯಿತು.

ಮತ್ತೊಬ್ಬರು ಕಡಿದಾದ ಬೆಟ್ಟದ ತುತ್ತ ತುದಿಯಲ್ಲಿ ನಿಂತು ಸೆಲ್ಫಿ ತೆಗೆದುಕೊಳ್ಳಲು ಹೋಗಿ ಜಾರಿ ಬಿದ್ದು ಪ್ರಾಣವನ್ನೇ ತೆತ್ತ ಘಟನೆ ಇತ್ತೀಚೆಗೆ ನಡೆಯಿತು.

ಮತ್ತೋರ್ವ ಹೆಣ್ಣು ಮಗಳು ತನ್ನ ಮುಖದ ನರಗಳಲ್ಲಿ ಒಂದು ರೀತಿಯ ಅಸಹಜತೆಯನ್ನು ಅನುಭವಿಸಿ ವೈದ್ಯರಲ್ಲಿ ಈ ಕುರಿತು ಚಿಕಿತ್ಸೆ ಪಡೆಯಲು ಹೋದಾಗ ಆಕೆಯ ಅರಿವಿಗೆ ಬಂದದ್ದು ಆಕೆಯ ಅತಿಯಾದ ಸೆಲ್ಫಿ ಹುಚ್ಚು ಆಕೆಯ ಮುಖದ ಸ್ನಾಯುಗಳನ್ನು ಸಂಕುಚಿತಗೊಳಿಸಿರುವುದು.

ತಾನು ತೆಗೆದುಕೊಂಡ ಸೆಲ್ಫಿಗೆ ತಾನು ಬಯಸಿದಷ್ಟು ಲೈಕ್ ಗಳು ಬರಲಿಲ್ಲ ಎಂದು ಬಹು ಮಹಡಿ ಕಟ್ಟಡದ ಮೇಲಿಂದ ಹಾರಿ ಆತ್ಮಹತ್ಯೆ ಮಾಡಿಕೊಂಡ ಯುವತಿ



ಹೀಗೆ ಸೆಲ್ಫಿಯ ಕುರಿತು ಮಾತನಾಡಿದರೆ ಸಾಲು ಸಾಲು



ದುರ್ಘಟನೆಗಳು ಕಾಣಸಿಗುತ್ತವೆ, ಕೇಳ ಬರುತ್ತವೆ.

ಹಾಗೆಂದು ಸೆಲ್ಫಿ ತೆಗೆದುಕೊಳ್ಳುವುದು ತಪ್ಪು ಎಂದರ್ಥ–ವಲ್ಲ, ಬದುಕಿನ ಸವಿಗಳಿಗೆಯಲ್ಲಿ ಜೊತೆಗಿದ್ದವರೊಂದಿಗೆ ತೆಗೆದುಕೊಳ್ಳುವ ಸೆಲ್ಫಿಗಳು, ಛಾಯಾ ಚಿತ್ರಗಳು ಮುಂದಿನ ಬದುಕಿನಲ್ಲಿ ಸವಿ ನೆನಪಿನ ಬುತ್ತಿಯನ್ನು ಕಟ್ಟಿಕೊಡುತ್ತವೆ. ಆದ–ರೆ ಅಪಾಯವನ್ನು ಆಹ್ವಾನಿಸುವ ಸೆಲ್ಫಿಗಳಿಗೆ ನನ್ನ ವಿರೋಧವಿದೆ.

ಹಾಗಾದರೆ ಜಾಹೀರಾತುಗಳಲ್ಲಿ, ಅಪಾಯವನ್ನು ಎದುರಿಸುವ ರೀತಿಯಲ್ಲಿ ಫೋಟೋಗಳು, ವಿಡಿಯೋ ಚಿತ್ರೀಕರಣಗಳು ನಡೆಯುತ್ತವೆ ಎಂದು ನೀವೆನ್ನಬಹುದು..., ಆದರೆ ಅಲ್ಲಿ ಜೀವ ರಕ್ಷಕ ಸಾಧನಗಳ ದಂಡೇ ಇರುತ್ತದೆ. ಯಾವುದೇ ರೀತಿಯ ಅಪಾಯವಾಗದಂತೆ ಚಿತ್ರೀಕರಣ ಮಾಡುವ ಅವರು ಇದಕ್ಕಾಗಿ ಲಕ್ಷಾಂತರ ರೂಪಾಯಿಗಳನ್ನು ವ್ಯಯಿಸುತ್ತಾರೆ. ಸಂಬಂಧಪಟ್ಟ ಇಲಾಖೆಗಳಿಂದ ಅನುಮತಿ ಪತ್ರವನ್ನು ಪಡೆದಿರುತ್ತಾರೆ.ಇಂತಹ ಚಿತ್ರೀಕರಣಗಳಲ್ಲಿ ಭಾಗವಹಿಸುವ ನಟರು ಕೂಡ ಜೀವರಕ್ಷಾ ಸಾಧನಗಳ ಬೆಂಬಲ ಹೊಂದಿರುತ್ತಾರೆ.

ಅಲ್ಲಿಯೂ ಕೂಡ ಎಷ್ಟೋ ಬಾರಿ ಆಯೋಜಕರ ನಿರ್ಲಕ್ಷದಿಂದ ಶಾಶ್ವತ ಅಂಗವಿಕಲತೆಯನ್ನು ಹೊಂದಿದವರು,ಜೀವ ಹಾನಿಗೊಳಪಟ್ಟವರು ಇದ್ದಾರೆ. ಆಗೆಲ್ಲ ಜನರ ಆಕ್ರೋಶ ಮುಗಿಲು ಮುಟ್ಟುತ್ತದೆ... ದಿನಗಳೆದಂತೆ ಘಟನೆಯ ಕಾವು ಆರಿ ಎಲ್ಲರೂ ಆ ದುರ್ಘಟನೆಯ ವಿಷಯವನ್ನು ಮರೆತುಬಿಡುತ್ತಾರೆ.

ಆದಾಗಿಯೂ ಕೈ ಕಾಲು ಮುರಿದುಕೊಂಡರೆ, ಜೀವ ಕಳೆದುಕೊಂಡರೆ ಸಂಬಂಧಪಟ್ಟ ಸಂಸ್ಥೆಯವರು ಸಾಕಷ್ಟು ಎಡತಾಕಿದ ಮೇಲೆ ಒಂದಷ್ಟು ಪರಿಹಾರವನ್ನು ನೀಡಿ ಕೈ ತೊಳೆದುಕೊಳ್ಳುತ್ತಾರೆ.... ತೊಂದರೆ ಅನುಭವಿಸುವವರು ದುರ್ಘಟನೆಗೆ ಈಡಾದ ವ್ಯಕ್ತಿಯ ಕುಟುಂಬದವರು ಮಾತ್ರ. ಇದು ಪರದೆಯ ಹಿಂದಿನ ಸತ್ಯ. ನಮಗೆ ಅಂತಹ ಯಾವ ರಕ್ಷಣೆಗಳು ಇರುತ್ತವೆ ಹೇಳಿ ನೋಡೋಣ!

ಕೆಲ ಸ್ಥಳಗಳು ಸೆಲ್ಫಿ ತೆಗೆದುಕೊಳ್ಳಲು ಅಪಾಯ ಎಂಬ ಅರಿವಿದ್ದು ಕೂಡ ತಮ್ಮ ಜೀವವನ್ನು ಒತ್ತೆ ಇಟ್ಟು ಸೆಲ್ಫಿ ತೆಗೆದುಕೊಳ್ಳುವ, ನಂತರ ಅವುಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಾಕುವ ಯುವ ಜನರ ದಂಡೇ ಇದೆ.

ನಾನು ಪ್ರೀತಿಸುತ್ತೇನೆ ಎಂದಿಗೂ ಕೈಬಿಡುವುದಿಲ್ಲ ಎಂಬ ಭಾವದಲ್ಲಿ ನೀವು ನಿಮ್ಮ ಜೊತೆಗಾರರೊಂದಿಗೆ ಇಂದು ಹಾಕಿರುವ ಸೆಲ್ಫಿ ಮುಂದೊಂದು ದಿನ ನಿಮ್ಮ ಬದುಕಿನ ದುಸ್ವಪ್ನವಾಗಿ ಕಾಡಬಹುದು.

ಸೆಲ್ಫಿ ತೆಗೆದುಕೊಳ್ಳಲು ಹೋಗಿ ಬದುಕನ್ನು ಕಳೆದುಕೊಂಡವರ ಜೊತೆಗಿದ್ದವರು ಕೂಡ ಜೀವನಪರ್ಯಂತ ಮಾನಸಿಕವಾಗಿ ನೋಯಬಹುದು.

ನೀವು ಹಾಕುವ ಸ್ವಂತಿಗೆ ಬರುವ ಲೈಕ್ಸ್ ಗಳು ಕಮೆಂಟ್ಗಳು ನಿಮ್ಮ ಗುರಿಯತ್ತ ನಿಮ್ಮನ್ನು ತಲುಪಿಸಲಾರವು ಜೀವನದ ಯಶಸ್ಸನ್ನು ನಿರ್ಧರಿಸಲಾರವು. ನಿಮ್ಮ ಹೊಟ್ಟೆಗೆ ಆಹಾರ ಕೊಡಲಂತೂ ಸಾಧ್ಯವೇ ಇಲ್ಲ... ಅಂದಾಗ ಯಾಕೆ ಈ ರಿಸ್ಕ್? ಬೇರೆ ಯಾರೋ ನಿಮ್ಮ ಸಾಹಸವನ್ನು ಮೆಚ್ಚಿ ನಿಮ್ಮನ್ನು ಪ್ರಶಂಸಿಸಲು ಜೀವವನ್ನೇ ಒತ್ತೆ ಇಟ್ಟು ಸೆಲ್ಫಿ ತೆಗೆದುಕೊಳ್ಳುವ ಹುಚ್ಚೇಕೆ?

ಈ ಸೆಲ್ಫಿಯಿಂದ ನಿಮ್ಮ ಪ್ರಾಣ ಹೋದರೆ ಅದನ್ನು ಮರಳಿ ತರಲು ಸಾಧ್ಯವೇ?

ನಿಮ್ಮ ಪಾಲಕರ ಬದುಕಿನ ಆಶಾಕಿರಣ ನೀವು. ಭರವಸೆ ನೀವು. ಅಕಸ್ಮಾತ್ ತೊಂದರೆಗೆ ಈಡಾಗಿ ನಿಮಗೆ ಏನಾದರೂ ಆದರೆ ನಿಮ್ಮ ಹೆತ್ತವರ ಗತಿ ಏನು?

ಎಲ್ಲಕ್ಕಿಂತಲೂ ಮುಖ್ಯವಾಗಿ ಬದುಕು ಅಮೂಲ್ಯವಾದದು. ಕ್ಷುಲ್ಲಕ ಕಾರಣಕ್ಕಾಗಿ ಅದನ್ನು ಕಳೆದುಕೊಳ್ಳುವುದು ಅಕ್ಷರಶಃ ತಪ್ಪು.



ನಿಜವಾಗಿಯೂ ಬೇರೊಬ್ಬರು ನಿಮ್ಮನ್ನು ಗುರುತಿಸಬೇಕು, ನಿಮ್ಮ ಕಾರ್ಯವನ್ನು ಹೊಗಳಬೇಕು, ಲೈಕುಗಳ ಮಹಾಪೂರ ನಿಮಗೆ ದೊರೆಯಲೇಬೇಕು ಎಂದಾದರೆ

ಚೆನ್ನಾಗಿ ಓದಿ ಒಳ್ಳೆಯ ಅಂಕಗಳನ್ನು ತೆಗೆದು ಉದ್ಯೋಗ, ವ್ಯವಹಾರ, ಕೃಷಿ, ನಾಗರಿಕ ಸೇವೆ ಮುಂತಾದೆಡೆ ನಿಮ್ಮನ್ನು ನೀವು ತೊಡಗಿಸಿಕೊಳ್ಳುವ ಮೂಲಕ



ಆದಾಯ ಮಾರ್ಗವನ್ನು ರೂಪಿಸಿಕೊಂಡು ನಿಮ್ಮನ್ನು ಹೆತ್ತವರ, ಒಡಹುಟ್ಟಿದವರ ಸುತ್ತಣ ಸಮಾಜದ ಕಣ್ಣಿನ ಸೆಲ್ಫಿಯಲ್ಲಿ ಮೆಚ್ಚುಗೆಯಿಂದ ಬಂಧಿಯಾಗಿ.

ಬದುಕಿನ ದಾರಿಯಲ್ಲಿ ನಿಮಗಿಂತ ಕಡಿಮೆ ಮೂಲಭೂತ ಅವಶ್ಯಕತೆಗಳನ್ನು ಹೊಂದಿದ ಜನ–ರಿಗೆ ಸಹಾಯಕವಾಗುವಂತಹ ಕೆಲಸಗಳಲ್ಲಿ ತೊಡಗಿಕೊಂಡು ಸಾಮಾಜಿಕ ಸೇವೆ ಮಾಡಿ.

ಅನಾಥರ, ಅಂಗವಿಕಲರ, ಅಸಹಾಯಕ ಮತ್ತು ವೃದ್ಧರ ಬದುಕನ್ನು ನೇರ್ಪಡಿಸಲು ಸಹಾಯ ಮಾಡಿ.

ನೊಂದವರ ಕಣ್ಣೀರೊರೆಸಿ ನಗೆಯನ್ನು ಚೆಲ್ಲಲು ಸಹಾಯ ಮಾಡಿ.

ಹಸಿದವರಿಗೆ ಒಂದು ತುತ್ತು ಅನ್ನ ಹಾಕಿ, ಸಾಧ್ಯವಾದರೆ ಅವ–ರಿಗೊಂದು ಉದ್ಯೋಗ ಕಲ್ಪಿಸಿ ಸಹಾಯ ಮಾಡಿ.

ಎಲ್ಲಕ್ಕಿಂತಲೂ ಮುಖ್ಯವಾಗಿ ಪ್ರಸ್ತುತ ಸಮಾಜದಲ್ಲಿ ಹೆಚ್ಚು ಹೆಚ್ಚು ಮಾನವೀಯ ಪ್ರಜ್ಞೆಯ ಅವಶ್ಯಕತೆ ಇದ್ದು ಅಂತಹ ಪ್ರಜ್ಞೆಯನ್ನು ಬೆಳೆಸಿಕೊಳ್ಳಲು ಖುದ್ದು ಮುಂದಾಗಿ ಮತ್ತು ಇತರರನ್ನು ಪ್ರೋತ್ಸಾಹಿಸಿ.

ಮೇಲ್ಕಂಡ ಎಲ್ಲ ಕಾರ್ಯಗಳನ್ನು ಮಾಡುವುದರಿಂದ ನಿಮಗೆ ಹೆತ್ತವರ ನೆರೆಹೊರೆಯ ಮತ್ತು ಸಮಾಜದ ಮೆಚ್ಚುಗೆ ದೊರೆಯುತ್ತದಲ್ಲದೇ ಬದುಕಿನಲ್ಲಿ ಮಹತ್ತರವಾದದನ್ನು ಸಾಧಿಸಿದ ಆತ್ಮ ತೃಪ್ತಿ ದೊರೆಯುತ್ತದೆ. ಆತ್ಮತೃಪ್ತಿಗಿಂತ ಮಿಗಿಲಾದ ಸೆಲ್ಫಿ ಎಲ್ಲಿದೆ ಹೇಳಿ!?

ಅಂತಿಮವಾಗಿ ಹೇಳುವುದಾದರೆ ನಿಮ್ಮ ಸ್ವಂತ ಬದುಕಿನ ಸೆಲ್ಫಿ ನಿಮ್ಮ ಕಣ್ಣು ಮತ್ತು ಮನಗಳಲ್ಲಿ ಅಚ್ಚಾಗಲಿ. ನಿಮ್ಮ ಕಳೆದ ದಿನಗಳಿಗಿಂತ ಮುಂದಿನ ದಿನಗಳನ್ನು ಉತ್ತಮವಾಗಿಸುವ ನಿಮ್ಮದೇ ಬದುಕಿನ ಸೆಲ್ಫಿಯಲ್ಲಿ ನಿಮ್ಮನ್ನು ನೀವು ಚಂದಗಾಣಿಸಿಕೊಂಡು ನೋಡಿ ಆನಂದಿಸಿ.

# ಮೊಹರಂ ಹಬ್ಬವನ್ನು ಶಾಂತಿ & ಸೌಹಾರ್ದಯುತವಾಗಿ ಆಚರಿಸಿ

**ಉದಯರಶ್ಮಿ ನ್ಯೂಸ್**



ಮುದ್ದೇಬಿಹಾಳ: ಮೊಹರಂ ಹಬ್ಬದಲ್ಲಿ ಶೆರೆ ಕುಡಿದು ದಾಂಧಲೆ ಮಾಡುವದು ಕಂಡು ಬಂದರೆ ಅಂಥವರ ಮೇಲೆ ಸೂಕ್ತ ಶಿಸ್ತು ಕ್ರಮ ಕೈಗೊಳ್ಳುವುದಾಗಿ ಇಲ್ಲಿನ ಕ್ರೈಂ ಪಿಎಸ್‌ಐ ಆರ್.ಎಲ್.ಮನ್ನಾಬಾಯಿ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಮೊಹರಂ ಹಬ್ಬದ ಕುರಿತು ನಡೆದ ಶಾಂತಿ ಸಭೆಯಲ್ಲಿ ಅವರು ಮಾತನಾಡಿದರು.

ದೇವರು ಕೂರುವ ದಿನದಿಂದ ಕಳುಹಿಸಿ ಕೊಡುವ ದಿನದವರೆಗೂ ಗ್ರಾಮದ ಮುಖಂಡರು, ಹಿರಿಯರು ಹಬ್ಬವನ್ನು ಶಾಂತಿಯುತ ಮತ್ತು ಸೌಹಾರ್ದಯುತವಾಗಿ ಆಚರಿಸಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸುವಂತೆ, ಅವಶ್ಯವಿದ್ದಲ್ಲಿ ಪೊಲೀಸ್ ಇಲಾಖೆಯ ಸಹಕಾರ ಕೋರುವಂತೆ ಸಲಹೆ ನೀಡಿದರು. ಹಬ್ಬದ ಕೊನೆಯ ದಿನವಾದ ದಪ್ಪನ ದಿನದಂದು ಸೂಕ್ತ ಬಂದೋಬಸ್ತ ನೀಡಲಿರುವದಾಗಿ ತಿಳಿಸಿದರು.

ಈ ವೇಳೆ ಕಸಾಪ ಅಧ್ಯಕ್ಷ ಕಾಮರಾಜ ಬಿರಾದಾರ, ಪುರಸಭೆ ಸದಸ್ಯ ಮಹೆಬೂಬ ಗೊಳಸಂಗಿ, ಎನ್‌ಎಸ್‌ಯುಐ ಪ್ರಧಾನ ಕಾರ್ಯದರ್ಶಿ ಸದ್ದಾಂ ಕುಂಟೋಜಿ, ಯುವ ಕಾಂಗ್ರೆಸ್ ಅಧ್ಯಕ್ಷ ರಫೀಕ ಶಿರೋಳ ಮತ್ತೀತರರು ಮಾತನಾಡಿ, ನಮ್ಮ ಪಟ್ಟಣ ಶಾಂತಿ ಮತ್ತು ಸೌಹಾರ್ದಯುತೆಗೆ ಹೆಸರುವಾಸಿಯಾಗಿದೆ. ಇದುವರೆಗೆ ಯಾವುದೇ ಅಹಿತಕರ ಘಟನೆಗಳು ಸಂಭವಿಸಿಲ್ಲ. ಈ ಬಾರಿಯೂ ನಾವು ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಶಾಂತಿ ಮತ್ತು ಸೌಹಾರ್ಧಯುತವಾಗಿ ಹಬ್ಬವನ್ನು ಆಚರಿಸುತ್ತೇವೆ ಎಂದರು.

ಈ ವೇಳೆ ಪ್ರಮುಖರಾದ ಸಂಗಣ್ಣ ಮೇಲಿನಮನಿ, ರಾಮಣ್ಣ ಪೂಜಾರಿ, ಶಿವಣ್ಣ ಕಿರಶ್ಯಾಳ, ಹುಸೇನ ಮುಲ್ಲಾ, ಸದಾಶಿವ ಮಠ, ಶಿಕಂದರ ಜಾನ್ವೇಕರ, ತಿಪ್ಪಣ್ಣ ಮಾದರ, ಸಂಗಣ್ಣ ಮೇಲಿನಮನಿ, ಸಮೀರ ದ್ರಾಕ್ಷಿ, ಅಲ್ತಾಫ್ ಮುಲ್ಲಾ, ಐ.ಡಿ.ಮೋಮಿನ, ಬಸನಗೌಡ ಗೌಡರ, ಎಂ.ಎ.ಬನ್ನೆಟ್ಟಿ ಸೇರಿದಂತೆ ಮತ್ತೀತರರು ಇದ್ದರು.

# ಕಸಾಪ ಅಧ್ಯಕ್ಷ ಕಾಮರಾಜ ಗೆ ಪತ್ರಕರ್ತರಿಂದ ಸನ್ಮಾನ

**ಉದಯರಶ್ಮಿ ನ್ಯೂಸ್**



ಮುದ್ದೇಬಿಹಾಳ: ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಕಾಮರಾಜ ಬಿರಾದಾರ ಅವರನ್ನ ಪತ್ರಕರ್ತ ಪುಂಡಲೀಕ ಮುರಾಳ ನೇತೃತ್ವದಲ್ಲಿ ತಾಲೂಕಿನ ಪತ್ರಕರ್ತರು ಸನ್ಮಾನಿಸಿ ಗೌರವಿಸಿದರು. ಈ ವೇಳೆ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯಕಾರಿಣಿ ಸದಸ್ಯ ಡಿ.ಬಿ.ವಡವಡಗಿ, ಸದಸ್ಯರಾದ ಚೇತನ ಶಿವಶಿಂಪಿ, ಪರಶುರಾಮ ಕೊಣ್ಣೂರ, ಸಿದ್ದು ಚಲವಾದಿ ಕಾನಿಪ ಧ್ವನಿ ಸಂಘದ ಶಂಕರ ಹೆಬ್ಬಾಳ, ಮಾರುತಿ ಹಿಪ್ಪರಗಿ, ಗುಲಾಮ ದಫೇದಾರ ಸೇರಿದಂತೆ ಮತ್ತಿತರರು ಇದ್ದರು.

# ಬೇಡಿಕೆ ಈಡೇರಿಕೆಗೆ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರ ಮನವಿ

**ಉದಯರಶ್ಮಿ ನ್ಯೂಸ್**



ಸಿಂದಗಿ: ಈಗಾಗಲೇ ರಾಜ್ಯದಲ್ಲಿ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರು ನಮ್ಮ ಬೇಡಿಕೆಗಾಗಿ ಹಲವು ಬಾರಿ ಮನವಿ ಸಲ್ಲಿಸಿದ್ದೇವೆ. ಹಲವು ದಿನಗಳ ಹಿಂದೆ ತುಮಕೂರದಿಂದ ಬೆಂಗಳೂರದವರೆಗೆ ಪಾದಯಾತ್ರೆ ಮಾಡಿ 143 ದಿನಗಳ ಕಾಲ ನಿರಂತರವಾಗಿ ಅನಿರ್ಧಿಷ್ಟಾವಧಿ ಧರಣಿ ಮಾಡಿದ್ದರೂ ಸಹ ಸರ್ಕಾರ ನಮ್ಮ ಸಮಸ್ಯೆಯನ್ನು ಪರಿಹರಿಸಲು ಮುಂದಾಗಿಲ್ಲ ಎಂದು ಸಂಘದ ರಾಜ್ಯ ಕಾರ್ಯದರ್ಶಿ ಕಿರನಳ್ಳಿ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ತಾಲೂಕು ಆಡಳಿತ ಸೌಧದಲ್ಲಿ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಓ.ಪಿ.ಎಸ್ ಜಾರಿಗೊಳಿಸುವ ಮತ್ತು ಜ್ಯೋತಿ ಸಂಜೀವಿನಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಕೂಡಲೇ ಈಡೇ–ರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಅನುದಾನಿತ ಶಾಲಾ ಕಾಲೇಜುಗಳ ಪಿಂಚಣಿ ವಂಚಿತ ನೌಕರರ ಸಂಘ ತಾಲೂಕಾ ಘಟಕದ ಪದಾಧಿಕಾರಿಗಳು ತಹಶೀಲ್ದಾರ ಅವರ ಮೂಲಕ ರಾಜ್ಯ ಸರ್ಕಾರಕ್ಕೆ ಹಾಗೂ ಮುಖ್ಯಮಂತ್ರಿಗಳಿಗೆ ಶನಿವಾರ ಮನವಿ ಸಲ್ಲಿಸಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಚುನಾವಣೆಗೂ ಪೂರ್ವ ಡಿಸಿಎಂ ಡಿ.ಕೆ.ಶಿವಕುಮಾರ ಅವರು ನಮ್ಮ ಧರಣಿ ಸ್ಥಳಕ್ಕೆ ಆಗಮಿಸಿ ನಮ್ಮ ಸರ್ಕಾರ ಬಂದ ಮೇಲೆ ಕೂಡಲೇ ತಮ್ಮ ಸಮಸ್ಯೆಯನ್ನು ಪರಿಹ–ರಿಸುವದಾಗಿ ಮತ್ತು ಪ್ರಣಾಳಿಕೆಯಲ್ಲಿ ಘೋಷಣೆ ಮಾಡುವುದಾಗಿ ಭರವಸೆ ನೀಡಿದ್ದರು. ಆದರೆ ಸರ್ಕಾರ ರಚನೆಯಾಗಿ ಒಂದು ವರ್ಷವಾದರು ಇಲ್ಲಿಯವರೆಗೆ ಸರ್ಕಾರ ನಮ್ಮ ಸಮಸ್ಯೆಗೆ ಯಾವುದೇ ಸಕಾರಾತ್ಮಕ ಹೇಳಿಕೆ ನೀಡಿಲ್ಲ. ನಾವು ಸರ್ಕಾರಿ ನೌಕರರಂತೆ ಸರ್ಕಾರದ ಎಲ್ಲ ಕಾರ್ಯದಲ್ಲಿಯೂ ಸಕ್ರಿಯವಾಗಿ ಕಾರ್ಯ ಮಾಡುತ್ತೇವೆ. ಹಾಗಾದರೆ ಈ ತಾರತಮ್ಯ ನೀತಿ ಏಕೆ ಎಂದ ಅವರು ಓ.ಪಿ.ಎಸ್ ಜಾರಿ ವಿಳಂಬವಾದಲ್ಲಿ ರಾಜ್ಯ ಸರಕಾರಿ ನೌಕರರಿಗೆ ನೀಡುತ್ತಿರುವಂತೆ ಎನ್.ಪಿ.ಎಸ್‌ನ್ನು ಯಥಾವತ್ತಾಗಿ ಜಾರಿ ಮಾಡುವುದು, ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ದಶಕಗಳಿಂದ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಶೀಘ್ರ ಕ್ರಮ ಕೈಗೊಳ್ಳುವುದಾಗಬೇಕು, ಅನುದಾನಿತ ನೌಕರರಿಗೂ ಕೂಡ ಸರಕಾರಿ ನೌಕರರಂತೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಜಾರಿಗೊಳಿಸಬೇಕು ಎಂಬ ಅನೇಕ ಬೇಡಿಕೆಗಳನ್ನು ಈಡೇರಿಸಬೇಕು ಇಲ್ಲವಾದಲ್ಲಿ ರಾಜ್ಯಾದ್ಯಾಂತ ಉಗ್ರ ಹೋರಾಟಕ್ಕೂ ನಾವು ಸಿದ್ದರಾಗಿದ್ದೇವೆ ಎಚ್ಚರಿಕೆ ನೀಡಿದರು.

ಇದೇ ಸಂದರ್ಭದಲ್ಲಿ ತಾಲೂಕಾಧ್ಯಕ್ಷ ಅರುಣ ನಾಯ್ಕೋಡಿ, ಉಪಾಧ್ಯಕ್ಷ ಬಿ.ಬಿ.ಪಾಟೀಲ, ಪ್ರಧಾನ ಕಾರ್ಯದರ್ಶಿ ಶಿವಶಂಕರ ಉಮ್ಮರಗಿ, ಶಿಕ್ಷಕರಾದ ಆರ್.ಎಸ್.ಗಂಗನಳ್ಳಿ, ಸುರೇಶ ಗಂಗನಳ್ಳಿ, ಡಿ.ಬುಳಪ್ಪ, ಸಿದ್ದಲಿಂಗ ಕಿಣಗಿ, ಅರವಿಂದ ತೇಲಿ, ರಾಮಕೃಷ್ಣ ನಾಯಕ, ಮೇಘು ನಾಯಕ, ಅಶೋಕ ರಾಠೋಡ, ಸುಭಾಸ ಪಾಟೀಲ ರಾಜು ಭೈರಿ, ಡಾ.ಶಾಂತುಲಾಲ ಚವ್ಹಾಣ, ಬಂಗಾರಿ ಕೊಡಿಯಾ, ಆರ್.ಬಿ.ಬಿರಾದಾರ, ಎಸ್.ಸಿ.ಚಟ್ಟರಕಿ, ಎಸ್.ಎಮ್. ಜಂಗಿನಮಠ, ಎ.ಸಿ.ಬಿದರಿ, ಎಂ.ಎಸ್.ರೂಗಿ, ಬಿ.ಬಿ.ಪಾಟೀಲ, ಎಸ್.ಎಮ್.ಜಮಾದಾರ, ಬಿ.ಎಮ್. ರಾಠೋಡ, ಎಸ್.ಎಮ್.ಕುಂಬಾರ, ಬಿ.ಎನ್.ಪವಾರ, ಎಮ್.ಎ.ಲೋಣಿ, ಡಿ.ಎಮ್.ಕೊಟ್ಟಲಗಿ ಸೇರಿದಂತೆ ಅನೇಕರಿದ್ದರು.

# ಫಂಡರಪುರ ಜಾತ್ರೆಗೆ ವಿಶೇಷ ಸಾರಿಗೆ ವ್ಯವಸ್ಥೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಮಹರಾಷ್ಟ್ರದ ಫಂಡರಪುರದಲ್ಲಿ ದಿನಾಂಕ 14–7–2024ರಿಂದ 27–07–2024ರವರೆಗೆ ನಡೆಯುವ ಜರಗುವ ಆಷಾಢ ಏಕಾದಶಿ ಜಾತ್ರೆಯ ಅಂಗವಾಗಿ ಜಿಲ್ಲೆಯ ಯಾತ್ರಾರ್ಥಿಗಳಿಗೆ ಉತ್ತಮ ಸಾರಿಗೆ ಸೌಲಭ್ಯ ಕಲ್ಪಿಸುವ ದೃಷ್ಟಿಯಿಂದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಜಯಪುರ ವಿಭಾಗದ ವಿಜಯಪುರ, ಇಂಡಿ, ಸಿಂದಗಿ, ತಾಳಿಕೋಟೆ, ಮುದ್ದೇಬಿಹಾಳ, ಬಸವನ ಬಾಗೇವಾಡಿ ಘಟಕದ ಕೇಂದ್ರ ನಿಲ್ದಾಣದಿಂದ ವಿಶೇಷ ಸಾರಿಗೆ ಕಾರ್ಯಾಚರಣೆ ಮಾಡಲಾಗುವುದು. ಒಂದೇ ಗುಂಪಿನಿಂದ ಪ್ರಯಾಣಿಸುವ ಕನಿಷ್ಟ 47 ಜನ ಪ್ರಯಾಣಿಕರು ಲಭ್ಯವಾದಲ್ಲಿ ಅವರ ಸ್ವ–ಸ್ಥಳದಿಂದಲೇ ನೇರವಾಗಿ ಫಂಡರಾಪುರಕ್ಕೆ ಬಸ್ಸಿನ ವ್ಯವಸ್ಥೆ ಕಲ್ಪಿಸಲಾಗುವುದು.

ಪ್ರಯಾಣಿಕರು ಸಾರಿಗೆ ಸೌಲಭ್ಯ ಹಾಗೂ ಹೆಚ್ಚಿನ ಮಾಹಿತಿಗಾಗಿ ವಿಭಾಗೀಯ ಸಾರಿಗೆ ಅಧಿಕಾರಿ 7760992252, 7760992263(ವಿಜಯಪುರ ಘಟಕ 1), 7760992264(ವಿಜಯಪುರ ಘಟಕ 2), 7760992265(ಇಂಡಿ), 7760992267(ಮುದ್ದೇಬಿಹಾಳ), 7760992269(ಬಸವನ ಬಾಗೇವಾಡಿ), 7760992266(ಸಿಂದಗಿ), 7760992268(ತಾಳಿಕೋಟೆ) ಕೇಂದ್ರ ಬಸ್ ನಿಲ್ದಾಣ ವಿಜಯಪುರದ ದೂ. 08352–251344, ಮೊ.1160992258ಕ್ಕೆ ಮಾಡಬಹುದು ಎಂದು ವಿಜಯಪುರ ಕಕರಸ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

# ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

**ಉದಯರಶ್ಮಿ ನ್ಯೂಸ್**

ವಿಜಯಪುರ: ಬಸವನ ಬಾಗೇವಾಡಿ ತಾಲೂಕಿನ ಮಟ್ಟಿಹಾಳ 110/11 ಕೆವಿ ವಿದ್ಯುತ್ ವಿತರಣಾ ಉಪ ಕೇಂದ್ರದಲ್ಲಿ ಶಕ್ತಿ ಪರಿವರ್ತಕ ಅಳವಡಿಸುವ ಕಾಮಗಾರಿ ಹಿನ್ನೆಲೆಯಲ್ಲಿ ಮಾರ್ಗ ಮುಕ್ತತೆ ತೆಗೆದುಕೊಳ್ಳಲಾಗಿದ್ದು, 110ಕೆವಿ ಮಟ್ಟಿಹಾಳ ಉಪ ಕೇಂದ್ರ 11 ಕೆವಿ ಮಾರ್ಗಗಳಲ್ಲಿ ಜುಲೈ 7ರ ಬೆಳಿಗ್ಗೆ 7ರಿಂದ ಜುಲೈ 9ರ ಸಂಜೆ 7 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸುವಂತೆ ಬಸವನ ಬಾಗೇವಾಡಿ ಹೆಸ್ಕಾಂನ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆಲೋಶಿಫ್ ಪಡೆಯಲು ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: 2024–25ನೇ ಸಾಲಿನಲ್ಲಿ ನೋಂದಣಿಯಾಗಿ ಎಂಫಿಲ್ ಹಾಗೂ ಪಿಎಚ್‌ಡಿ ವ್ಯಾಸಂಗ ಮಾಡುತ್ತಿರುವ ಅರ್ಹ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಫೆಲೋಶಿಫ್ ಪಡೆಯಲು ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಅಂಗೀಕೃತವಾದ ವಿಶ್ವವಿದ್ಯಾಲಯಗಳಲ್ಲಿ ಪೂರ್ಣಕಾಲಿಕವಾಗಿ ಪಿಎಚ್‌ಡಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮೂರು ವರ್ಷಗಳ ಅವಧಿಗೆ ಹಾಗೂ ಎಂ.ಫಿಲ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಜೆ ಆರ್ ಎಫ್ ಜ್ಯೂನಿಯರ್ ರಿಸರ್ಚ್ ಫೆಲೋಶಿಫ್ ಮಾದರಿಯಲ್ಲಿ ಎರಡು ವರ್ಷಗಳ ಅವಧಿಗೆ ಪ್ರತಿ ತಿಂಗಳ ರೂ.25,000 ಮತ್ತು ಪ್ರತಿವರ್ಷಕ್ಕೆ ಒಂದು ಬಾರಿ ರೂ.10,000 ನಿರ್ವಹಣಾ ವೆಚ್ಚ ನೀಡಲಾಗುತ್ತದೆ.

ಅರ್ಹರು ಸೇವಾಸಿಂಧು ಪೋರ್ಟಲ್ ಮೂಲಕ https://sevasindhu.karnataka.gov.in ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಿ, ಅಗತ್ಯ ದಾಖಲಾತಿಗಳನ್ನು ದೃಢೀಕೃತ ಪತ್ರಿಗಳೊಂದಿಗೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಿಜಯಪುರ ಕಚೇ–ರಿಗೆ ಸಲ್ಲಿಸುವುಂತಯೂ, ಹೆಚ್ಚಿನ ಮಾಹಿತಿಗಾಗಿ ವಿಜಯಪುರ ಜಿಲ್ಲೆಯ ಅಲ್ಪಸಂಖ್ಯಾತರ ಕಛೇರಿ ದೂ:08352–295523 ಸಂಪರ್ಕಿಸಬಹುದಾಗಿದೆ ಎಂದು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ರೀಡಾ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ರಾಜ್ಯ ಸರ್ಕಾರದ ಕ್ರೀಡಾ ವಿದ್ಯಾರ್ಥಿವೇತನ ಯೋಜನೆಯಡಿ ಪ್ರತಿಭಾವಂತ ಕ್ರೀಡಾಪುಟಗಳನ್ನು ಪ್ರೋತ್ಸಾಹಿಸುವ ಮಾಧ್ಯಮಿಕ–ಪ್ರೌಢಶಾಲಾ ವಿದ್ಯಾರ್ಥಿ ಕ್ರೀಡಾಪಟುಗಳಿಗೆ ವಾರ್ಷಿಕ 10 ಸಾವಿರ ರೂ. ಪ್ರೋತ್ಸಾಹಿತ ಕ್ರೀಡಾ ವಿದ್ಯಾರ್ಥಿವೇತನ ಪಡೆಯಲು ಅರ್ಹರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಕ್ರೀಡಾ ಪಟುಗಳು ಅಧಿಕೃತ ಜಾಲತಾಣ https://sevasindhuservices.karnataka.gov.in ಮೂಲಕ ಆನ್‌ಲೈನ್‌ನಲ್ಲಿ ದಿನಾಂಕ : 20–07–2024ರೊಳಗೆ ಅರ್ಜಿ ಸಲ್ಲಿಸಬೇಕು. ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣ ವಿಜಯಪುರ ದೂ: 08352–251085, ಮೊ: 9480886555 ಸಂಖ್ಯೆಗೆ ಸಂಪರ್ಕಿಸುವಂತೆ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾನಗರ ಪಾಲಿಕೆ ಸ್ಥಾಯಿ ಸಮಿತಿ ಸದಸ್ಯರ ಆಯ್ಕೆಗೆ ಚುನಾವಣೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಮಹಾನಗರ ಪಾಲಿಕೆಯ 21ನೇ ಅವಧಿಯ ವಿವಿಧ ನಾಲ್ಕು ಸ್ಥಾಯಿ ಸಮಿತಿಗಳಿಗೆ ಸದಸ್ಯರ ಆಯ್ಕೆಗಾಗಿ ಜು.15ರಂದು ಚುನಾವಣೆ ನಡೆಸಲು ವಿಜಯಪುರ ಮಹಾನಗರ ಪಾಲಿಕೆ ಅಧ್ಯಕ್ಷಾಧಿಕಾ–ರಿಗಳೂ ಆದ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರು ದಿನಾಂಕ ನಿಗದಿಗೊಳಿಸಿದ್ದಾರೆ.

ಚುನಾವಣಾ ವೇಳಾಪಟ್ಟಿಯಂತೆ ವಿಜಯಪುರ ಮಹಾನಗರ ಪಾಲಿಕೆಯ ಸಭಾ ಭವನದಲ್ಲಿ ಜು.15ರಂದು ಮಧ್ಯಾಹ್ನ 3 ಗಂಟೆಗೆ ಸಮಯ ನಿಗದಿಪಡಿಸಿದ್ದು, ಅಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 12 ಗಂಟೆಯವರೆಗೆ ವಿವಿಧ ನಾಲ್ಕು ಸ್ಥಾಯಿ ಸಮಿತಿಗಳಿಗೆ ನಾಮಪತ್ರಗಳ ಸ್ವೀಕಾರ, ಮಧ್ಯಾಹ್ನ 3 ಗಂಟೆಗೆ ಚುನಾವಣಾ ಪ್ರಕ್ರಿಯೆ ಆರಂಭವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

# ಬ್ಯೂಟಿಫುಲ್ ಮನಸುಗಳು

**ಭಾವರಶ್ಮಿ**



– ಡಾ. ರಾಜಶೇಖರ ನಾಗೂರ

("ನಮ್ಮ ಕಥಾ ಅರಮನೆ" ಬರಹಗಾರರು)

ಉದಯರಶ್ಮಿ ದಿನಪತ್ರಿಕೆ



ಒಂದು ಕ್ಲಾಸ್ ರೂಮಲ್ಲಿ ಸುಮಾರು ವಿದ್ಯಾರ್ಥಿಗಳಿದ್ದರು. ಅವರಲ್ಲಿ ಒಬ್ಬ ಎದ್ದುನಿಂತು ಪ್ರೊಫೆಸರ್ ಗೆ ಹೇಳಿದ ಸರ್ ನನ್ನ ತಂದೆ ನನ್ನ ಜನ್ಮ ದಿನಕ್ಕೆ ಒಂದು ದುಭಾರಿ ಗಡಿಯಾರವನ್ನು ಉಡುಗೊರೆಯಾಗಿ ಕೊಟ್ಟಿದ್ದರು. ಈ 5 ನಿಮಿಷದ ಬ್ರೇಕ್ ನಲ್ಲಿ ಅದನ್ನು ಇಲ್ಲಿಯೇ ಬಿಟ್ಟು ಹೊರಗೆ ಹೋಗಿದ್ದೆ. ಬಂದು ನೋಡಿದರೆ ಕಾಣುತ್ತಿಲ್ಲ. ಆಗ ಪ್ರೊಫೆಸರ್ ವಿಚಾರ ಮಾಡಲಾಗಿ ಈ ಹುಡುಗ ಹೊರಗೆ ಹೋಗಿ ಒಳಗೆ ಬರುವವರೆಗೆ ಕ್ಲಾಸ್ರೂಮ್ ಒಳಗಿರುವ ಯಾವನೋ ಒಬ್ಬ ಕದ್ದಿರುತ್ತಾನೆ ಎಂದು ಊಹಿಸಿದರು.

ಎಲ್ಲ ವಿದ್ಯಾರ್ಥಿಗಳಿಗೆ ಎದ್ದು ನಿಲ್ಲಿಸಿ ತಮ್ಮ ತಮ್ಮ ಕರ್ಚೀಫಿನಿಂದ ತಮ್ಮ ಕಣ್ಣುಗಳನ್ನು ಕಟ್ಟಿಕೊಳ್ಳಲು ತಿಳಿಸಿದರು. ಒಬ್ಬೊಬ್ಬರನ್ನು ಮೈಮುಟ್ಟಿ ಹುಡುಕುತ್ತಾ ಬಂದಾಗ ಒಬ್ಬನ ಜೇಬಿನಲ್ಲಿ ಅದು ಸಿಕ್ಕಿತು. ಅದನ್ನು ಕಳೆದುಕೊಂಡ ವಿದ್ಯಾರ್ಥಿಗೆ ಒಪ್ಪಿಸಿ, ಎಲ್ಲರಿಗೂ ಕಣ್ಣಿನ ಬಟ್ಟೆ ತೆಗೆಯಲು ತಿಳಿಸಿದರು. ಎಂದಿನಂತೆ ಪಾಠ ಮುಂದುವರೆಯಿತು.

ಆದರೆ ಗಡಿಯಾರ ಕದ್ದ ವಿದ್ಯಾರ್ಥಿಯ ಮನದಲ್ಲಿ ಭಯ, ಆತಂಕ ಶುರುವಾಗಿತ್ತು. ಇಂದೋ ನಾಳೆಯೋ ನಾನು ಕಳ್ಳ ಎಂದು ಎಲ್ಲರ ಮುಂದೆ ಬಹಿರಂಗವಾಗಿ ವಿಷಯ ತಿಳಿಸುತ್ತಾರೆ. ಆಗ ನನ್ನ ಗತಿ ಏನಾಗಬೇಕು ಎಂದು ಆತಂಕದಿಂದಲೇ ಕ್ಲಾಸಿಗೆ ಬರುತ್ತಿದ್ದ. ಹೀಗೆ ದಿನಗಳು ಕಳೆದು, ತಿಂಗಳುಗಳು ಕಳೆದು, ವರ್ಷವೇ ಕಳೆದು ಹೋಯಿತು. ಆ ವಿಷಯ ಯಾರಿಗೂ ಗೊತ್ತಾಗಲಿಲ್ಲ. ಎಲ್ಲ ವಿದ್ಯಾರ್ಥಿಗಳು ಪರೀಕ್ಷೆ ಮುಗಿಸಿ ಕಾಲೇಜಿನಿಂದ ನಿರ್ಗಮಿಸಿ ಹೋದರು.

ಹಲವು ವರ್ಷಗಳ ನಂತರ ಗಡಿಯಾರ ಕದ್ದ ವಿದ್ಯಾರ್ಥಿ ದೊಡ್ಡ ಬಿಸಿನೆಸ್ ಮ್ಯಾನ್ ಆಗಿ ಒಳ್ಳೆಯ ಹೆಸರು ಮಾಡಿದ್ದ. ಮುಂದೆ ಒಂದು ದಿನ ಆ ಕಾಲೇಜಿನ ವಿದ್ಯಾರ್ಥಿಗಳ ರಿಯೂನಿಯನ್ ಕಾರ್ಯಕ್ರಮದ ಮುಖ್ಯ ಆಕರ್ಷಣೆಯಾಗಿ ಅದೇ ಹುಡುಗ ಕಾಲೇಜಿಗೆ ಬಂದ. ಆತ ನೇರವಾಗಿ ಅದೇ ಪ್ರೊಫೆಸರ್ ಹತ್ತಿರ ಬಂದು ಕಾಲಿಗೆ ನಮಸ್ಕರಿಸಿ ಚಿಕ್ಕ ದನಿಯಲ್ಲಿ ಹೇಳಿದ ಸರ್ ಇಂದು ನಾನು ಜೀವಂತವಾಗಿರಲು ನೀವೇ ಕಾರಣ. ನನ್ನ ಇವತ್ತಿನ ಈ ಸಾಧನೆಗೆ ನೀವು ಮಾತ್ರ ಕಾರಣ. ಆಗ ಆ ಪ್ರೊಫೆಸರ್ ಆಶ್ಚರ್ಯಚಕಿತರಾಗಿ ನಾನು ಹೇಗೆ ಕಾರಣ ಮಗು ಎಂದರು.

ಸರ್ ಅಂದು ನಾನು ಆ ಗಡಿಯಾರವನ್ನು ಕದ್ದ ವಿಷಯ ನೀವು ಯಾರಿಗೂ ಹೇಳಲಿಲ್ಲ ಬಹಿರಂಗಪಡಿಸಲಿಲ್ಲ. ನನ್ನ ಹೆಸರು ಬಹಿರಂಗವಾದ ದಿನ ನಾನು ಆತ್ಮಹತ್ಯೆ ಮಾಡಿಕೊಳ್ಳಬೇಕೆಂದು ನಿರ್ಧಾರ ಮಾಡಿದ್ದೆ. ಅದೆಷ್ಟು ದಿನ ಕಳೆದರೂ ನೀವು ಈ ವಿಷಯವನ್ನು ಬಹಿರಂಗಪಡಿಸಲಿಲ್ಲ. ಆದ್ದರಿಂದ ನಾನು ಅಂದೇ ನಿರ್ಧರಿಸಿದೆ. ಇನ್ನೂ ಜೀವನದಲ್ಲಿ ನಿಯತ್ತಾಗಿ ಬದುಕಬೇಕೆಂದು. ಈ ನನ್ನ ಬದಲಾವಣೆಗೆ ಅವಕಾಶ ಕಲ್ಪಿಸಿಕೊಟ್ಟದ್ದು ನೀವೇ. ಆದ್ದರಿಂದ ನೀವೇ ನನ್ನ ದೇವರು ಎಂದ.

ಪ್ರೊಫೆಸರ್ ಆಶ್ಚರ್ಯಚಕಿತರಾಗಿ ಹೌದೇ! ಆ ವಿದ್ಯಾರ್ಥಿ ನೀನೆಯೋ? ನನಗೂ ಗೊತ್ತಿರಲಿಲ್ಲ ಎಂದರು. ಆ ದಿನ ನಾನು ಎಲ್ಲ ವಿದ್ಯಾರ್ಥಿಗಳ ಕಣ್ಣನ್ನು ಕಟ್ಟಿಸಿ, ನಾನು ಕೂಡ ನನ್ನ ಕಣ್ಣುಗಳನ್ನು ಕಟ್ಟಿಕೊಂಡಿದ್ದೆ. ಏಕೆಂದರೆ ಕದ್ದಿರುವ ವಿದ್ಯಾರ್ಥಿ ಯಾರೇ ಆಗಿರಲಿ, ಅವನು ನನ್ನ ವಿದ್ಯಾರ್ಥಿಯೇ. ನನ್ನ ದೃಷ್ಟಿಕೋನದಲ್ಲಿ ನನ್ನ ಯಾವ ವಿದ್ಯಾರ್ಥಿಯೂ ಕೆಳಮಟ್ಟದಲ್ಲಿ ಗುರುತಿಸಿಕೊಳ್ಳಬಾರದು. ಹೀಗಾಗಿ ನನಗೂ ಇವತ್ತೇ ತಿಳಿಯಿತು ಆ ವಿದ್ಯಾರ್ಥಿ ನೀನೇ ಎಂದು.



ಎದುರಿಗೆ ನಿಂತ ವಿದ್ಯಾರ್ಥಿಯ ಕಣ್ಣಾಲೆಗಳು ತುಂಬಿ ಹ–ರಿಯತೊಡಗಿತ್ತು. ಮತ್ತೊಮ್ಮೆ ಗುರುಗಳ ಪಾದಕ್ಕೆ ಹಣೆ ಮುಟ್ಟಿ ನಮಸ್ಕರಿಸಿ ಈ ನಿಮ್ಮ ಕ್ಷಮಾ ಗುಣದಿಂದ ನಾನು ಮತ್ತೆ ಮನುಷ್ಯನಾಗಿರುವೆ ಎಂದ.

***

ಇಂದಿನ ಯುಗದಲ್ಲಿ ಪ್ರತಿ ವ್ಯಕ್ತಿಯೂ ಇನ್ನೊಬ್ಬರ ತಪ್ಪುಗಳನ್ನು ಹುಡುಕಿ ಎತ್ತಿತೋ–ರಿಸುವ ಕಾರ್ಯದಲ್ಲಿಯೇ ಮಗ್ನನಾಗಿರುತ್ತಾನೆ.

1) ಪರಿವಾರದಲ್ಲಿ ಅಣ್ಣ–ತಮ್ಮಂದಿರ, ಅಪ್ಪ–ಅಮ್ಮಂದಿರ, ಮಕ್ಕಳ, ಹೆಂಡತಿಯ ತಪ್ಪುಗಳು.

2) ಕೆಲಸದಲ್ಲಿ ಹಿರಿಯ ಅಧಿಕಾರಿಯ, ಸಹೋದ್ಯೋಗಿಯ ತಪ್ಪುಗಳು.

3) ಸಮಾಜದ, ಸರಕಾರಗಳ ತಪ್ಪುಗಳು.

4) ಮುಖ ಪುಸ್ತಕದಲ್ಲಂತೂ ಹಗಲು ರಾತ್ರಿ ಕೆಲವರ ಕೆಲಸವೇ ಇದು.

–– ಯಾರೋ ಒಬ್ಬ ತಿಳಿದೋ ತಿಳಿಯದೆಯೋ ತಪ್ಪು ಮಾಡಿದ್ದು ಗೊತ್ತಾದಲ್ಲಿ ಅವರನ್ನು ಕ್ಷಮಿಸಿಬಿಡಿ. ಅವನಿಗೆ ಅಥವಾ ಅವಳಿಗೆ ತನ್ನ ಜಟಜಿ–ಡಿಜಿಠಿಜಬಿಣ ಉಳಿಸಿಕೊಳ್ಳಲು ಒಂದು ಅವಕಾಶ ಮಾಡಿಕೊಡಿ.

–– ತಪ್ಪಿತಸ್ಥ ಎಂದು ತಿಳಿದ ಮೇಲೂ ತನ್ನನ್ನು ತಾನು ಸುಧಾ–ರಿಸಿಕೊಳ್ಳಲು ಒಂದು ಅವಕಾಶ ಕೊಟ್ಟು ಸುಮ್ಮನಾಗಿ ಬಿಡಿ. ಅವನು ಅಥವಾ ಅವಳು ಮುಖ ಮೇಲೆತ್ತಿ ಬದುಕಲು ಒಂದು ಅವಕಾಶ ಕಲ್ಪಿಸಿಕೊಟ್ಟಂತಾಗುತ್ತದೆ.

ಇಂದಿನ ಯುಗದ ತಪ್ಪು ಹುಡುಕುವವರ ಮಧ್ಯೆ "ಕ್ಷಮಿಸುವ ಬ್ಯೂಟಿಫುಲ್ ಮನಸುಗಳು" ನಾವಾಗೋಣ. ಗಾಂಧೀಜಿ ಹೇಳುವಂತೆ "ಕ್ಷಮಿಸುವುದು ಮತ್ತು ಕ್ಷಮೆ ಕೇಳುವುದು ಶಕ್ತಿಶಾಲಿಗಳ ಸಾಮರ್ಥ್ಯವೇ ಹೊರತು ಹೇಡಿಗಳದ್ದಲ್ಲ."

# ಬಿಂಬ

**ಉದಯರಶ್ಮಿ ದಿನಪತ್ರಿಕೆ**

**ಕಾವ್ಯರಶ್ಮಿ**

– ಬಸವರಾಜ ಹೊನಗೌಡರ

("ನಮ್ಮ ಕಥಾ ಅರಮನೆ" ಬರಹಗಾರರು)



ನಿನ್ನ ಆ ನಗುವಿನ ಬಿಂಬ
ತುಂಬಿದೆ ನನ್ನ ಮನದ ತುಂಬ
ನೀ ನವಿರಾಗಿ ನಾಚಿ ನೀರಾದಂತೆ
ಹೃದಯದಲಿ ಗೀಚಿ ಬರೆದಂತೆ॥

ನಿನ್ನದೇ ಪ್ರತಿಬಿಂಬ ಕಣಕಣದಲಿ
ನೆನಪಿನ ರಿಂಗಣ ಹೃದಯ ಗೂಡಲಿ
ಗದ್ದಲವೆಬ್ಬಿಸಿದೆ ಪ್ರೀತಿಯ ನೆನಪಿನಲಿ
ಶೃಂಗಾರೋತ್ಸವ ಮನದ ಮೂಲೆಯಲಿ॥

ಕಣ್ಣುಮುಚ್ಚಿದರೂ ಬಿಂಬ ನಿನ್ನದೆ
ಪಿಸುಮಾತಿನಲ್ಲಿನ ಭಾವ ನಿನ್ನದೆ
ಹೃದಯ ಬಡಿತದ ಶಬ್ಧ ನಿನ್ನದೆ
ಕಲ್ಪನೆಯ ಕನವರಿಕೆ ನಿನ್ನದೆ॥



**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR